ಸಂಪುಟ : 10 ಸಂಚಿಕೆ: 152 ಪುಟ : 4+2 ಬೆಲೆ: 3.00 ರವಿವಾರ ಜುಲೈ 20 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 152 Pages : 4+2 Price : 3.00 Sunday July 20 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಉಪನ್ಯಾಸ ಕಾರ್ಯಕ್ರಮ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಜುಲೈ 20ರಂದು ಬೆಳಿಗ್ಗೆ 10ಕ್ಕೆ ನಡೆಯಲಿರುವ ಬಸವದಳದ 1655ನೇ ಶರಣ ಸಂಗಮದಲ್ಲಿ 'ಶರಣೆ ಜಯದೇವಿತಾಯಿ ಲಿಗಾಡೆ' ಅವರ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ನಿವೃತ್ತ ಪ್ರಾಚಾರ್ಯ, ಶರಣ ಎನ್.ಎಂ. ಪವಾಡಿಗೌಡ್ರ ಉಪನ್ಯಾಸ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಜಿಲ್ಲಾ ಮಟ್ಟದ ಜನಸಂಪರ್ಕ ಸಭೆ ಜುಲೈ 22ಕ್ಕೆ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್.ಲಾಡ್ ಅವರ ಅದ್ಯಕ್ಷತೆಯಲ್ಲಿ ಜುಲೈ 22ರಂದು ಬೆಳಿಗೆ 11 ಗಂಟೆಗೆ ಅಣ್ಣಿಗೇರಿ ಪಟ್ಟಣದ ಆದಿಕವಿ ಪಂಪ ಸ್ಮಾರಕ ಭವನದಲ್ಲಿ ಸಾರ್ವಜನಿಕ ಅಹವಾಲು ಸ್ವೀಕರಿಸಲು ಜಿಲ್ಲಾ ಮಟ್ಟದ ಜನ ಸಂಪರ್ಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಜುಲೈ 22ರಂದು ಜರಗುವ ಜಿಲ್ಲಾ ಮಟ್ಟದ ಜನಸಂಪರ್ಕ ಸಭೆಯಲ್ಲಿ ಸಾರ್ವಜನಿಕರು ತಮ್ಮ ಕುಂದು-ಕೊರತೆ, ಅಹವಾಲುಗಳನ್ನು ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದುರಾಡಳಿತವೇ ಕಾಂಗ್ರೆಸ್ ಪಕ್ಷದ ಸಾಧನೆ



■ವಿಜಯಸಾಕ್ಷಿ ಸುದ್ದಿ, ಗದಗ

ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದು ಎರಡು ವರ್ಷವಾಗಿದ್ದು, ಇದುವರೆಗೂ ದುರಾಡಳಿತವೇ ಇವರ ಸಾಧನೆಯಾಗಿದೆ. ಅದನ್ನು ಸಾರಲು ಮೈಸೂರಿನಲ್ಲಿ ಸಾಧನಾ ಸಮಾವೇಶ ಮಾಡಲಿದೆ ಎಂದು ಬಿಜೆಪಿ ಗದಗ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ ಆಕ್ಷೇಪಿಸಿದ್ದಾರೆ. ಈ ಬಗ್ಗೆ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಜನರನ್ನು ನಂಬಿಸಿ ಗರಿಷ್ಠ ಬಹುಮತ ಪಡೆದು ಆಡಳಿತಕ್ಕೆ ಬಂದ ಕಾಂಗ್ರೆಸ್ ಪಕ್ಷ ಜನರಿಗೆ ದ್ರೋಹ, ಅನ್ಯಾಯ, ಭ್ರಷ್ಟಾಚಾರವನ್ನೇ ಮಾಡುತ್ತ ಬಂದಿದೆ. ಪ್ರಾರಂಭದ ದಿನದಿಂದ ಮುಡಾ, ವಾಲ್ಮೀಕಿ ನಿಗಮದಲ್ಲಿ ನಡೆದ ನೂರಾರೂ ಕೋಟಿ ರೂಪಾಯಿಗಳ ಅನೇಕ ಹಗರಣ ಮಾಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಲೆಗೆ ಹೊಡೆದಂತೆ ಸುಳ್ಳು ಹೇಳಲು ಸಮಾವೇಶ ಮಾಡುತ್ತಿದ್ದಾರೆ. ಸುಳ್ಳನ್ನೇ ಸತ್ಯವೆಂದು ಹೇಳಿಕೊಂಡು ಸಾಧನಾ ಸಮಾವೇಶ ಮಾಡುತ್ತಿದ್ದಾರೆ. ನಿವೇಶನ ವಾಪಸ್ ಮಾಡಿದ ಮುಡಾ ಹಗರಣ, ಹಣ ಅವ್ಯವಹಾರ ಆದುದನ್ನು ಸ್ವತಃ ಸಿಎಂ ಒಪ್ಪಿಕೊಂಡ ವಾಲ್ಮೀಕಿ ನಿಗಮದ ಹಗರಣ ಸಂಬಂಧ ಮಾತನಾಡುತ್ತಿಲ್ಲ. ಅಧಿಕಾರಿಗಳ ಆತ್ಮಹತ್ಯೆ ಬಗ್ಗೆ ಚಕಾರ ಎತ್ತುತ್ತಿಲ್ಲ. ಪ್ರತಿಯೊಂದರಲ್ಲೂ ಕಮಿಷನ್, ಹಗಲುದರೋಡೆ ವಿಚಾರ ಎತ್ತಿರುವ ಅವರದೇ ಪಕ್ಷದ ಶಾಸಕ ಬಿ.ಆರ್ ಪಾಟೀಲರಿಗೆ ಏನು ಹೇಳುತ್ತಾರೆ ಎಂದು ಪ್ರಶ್ನಿಸಿದ್ದಾರೆ.

### ಆದರಹಳ್ಳಿ ಮನೆ ಕಳ್ಳತನವೂ ಸೇರಿ ವಿವಿಧ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಆರೋಪಿಗಳ ಬಂಧನ । 14.50 ಲಕ್ಷ ರೂ ಮೌಲ್ಯದ ವಸ್ತುಗಳು ವಶಕ್ಕೆ

# ಇಬ್ಬರ ಬಂಧನ, ಓರ್ವ ಪರಾರಿ

■ವಿಜಯಸಾಕ್ಷಿ ಸುದ್ದಿ, ಗದಗ/ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ತಾಲೂಕಿನ ಆದರಹಳ್ಳಿಯಲ್ಲಿ ಜುಲೈ 1ರಂದು ರಾತ್ರಿ 10 ಗಂಟೆಯಿಂದ ಜುಲೈ 2ರ ಮುಂಜಾನೆ 5.30 ಗಂಟೆಯ ನಡುವೆ ನಡೆದ ಮನೆ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿ ಮೂವರ ಪೈಕಿ ಇಬ್ಬರನ್ನು ಬಂಧಿಸಿದ್ದು, ಓರ್ವ ಪರಾರಿಯಾಗಿದ್ದಾನೆ ಎಂದು ಎಸ್‌ಪಿ ರೋಹನ್ ಜಗದೀಶ್ ಮಾಹಿತಿ ನೀಡಿದರು.

ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಶನಿವಾರ ಸುದ್ದಿಗೋಷ್ಠಿ ನಡೆಸಿ ಅವರು ಮಾಹಿತಿ ನೀಡುತ್ತಿದ್ದರು.

ಆದರಹಳ್ಳಿಯ ಸೋಗಿಹಾಳ ರಸ್ತೆಯಲ್ಲಿರುವ ಫಿರ್ಯಾದಿದಾರ ಮಂಗೇಶ ಲಮಾಣಿ ಅವರ ಮನೆ ಕಳ್ಳತನವಾಗಿತ್ತು. ಮನೆಯ ಕೀಲಿ ಮುರಿದು ಟ್ರಜರಿಯಲ್ಲಿಟ್ಟಿದ್ದ 5 ಗ್ರಾಂ ತೂಕದ ಬಂಗಾರದ ಬೋರಮಳ ಸರ, 2.5 ಗ್ರಾಂ ತೂಕದ ಬಂಗಾರದ ಬೆಂಡವಾಲಿ, 5 ಗ್ರಾಂ ತೂಕದ ಬಂಗಾರದ ಕೊರಳ ಚೈನ್, 2.5 ಗ್ರಾಂ ತೂಕದ ಬಂಗಾರದ ಡ್ರಾಪ್ ಗುಂಡುಗಳು ಸೇರಿ ಒಟ್ಟು 15 ಗ್ರಾಂ ತೂಕದ ಬಂಗಾರದ ಆಭರಣಗಳು ಕಳ್ಳತನವಾಗಿದ್ದವು.

ಅದೇ ದಿನ ಆದರಹಳ್ಳಿ ಗ್ರಾಮದ ಬಸ್ ಸ್ಟ್ಯಾಂಡ್ ಬಳಿಯಿರುವ ಮಾನಪ್ಪ ಸಣ್ಣರಾಮಪ್ಪ ವಡ್ಡರ, ಇವರ ಗ್ರಾಮ ಒನ್ ಸೆಂಟರ್‌ನ ಕೀಲಿ ಮುರಿದು ಅಂಗಡಿಯಲ್ಲಿದ್ದ ಒಟ್ಟು 18 ಸಾವಿರ ರೂ. ಮೊತ್ತದ ಒಂದು ಲ್ಯಾಪ್ಟಾಪ್ ಹಾಗೂ ಅದರ ಚಾರ್ಜರ್ ಸಮೇತ ಕಳ್ಳತನವಾದ ಬಗ್ಗೆ ಮಂಗೇಶ ಮಾಮಲೇಶಪ್ಪ ಲಮಾಣಿ ಲಕ್ಷ್ಮೇಶ್ವರ ಠಾಣೆಯಲ್ಲಿ ದೂರು ನೀಡಿದ್ದರು.



> ಇಂತಹ ಕಳ್ಳತನದ ಪ್ರಕರಣಗಳನ್ನು ತಡೆಗಟ್ಟಲು ಸಾರ್ವಜನಿಕರು ತಮ್ಮ ಮನೆ ಮತ್ತು ವಾಣಿಜ್ಯ ಸ್ಥಳಗಳಲ್ಲಿ ಸೂಕ್ತ ಭದ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಯಾವುದೇ ಸಂಶಯಾಸ್ಪದ ಚಟುವಟಿಕೆ ಕಂಡುಬಂದಲ್ಲಿ ತಕ್ಷಣ ಸ್ಥಳೀಯ ಪೊಲೀಸ್ ಠಾಣೆಯನ್ನು ಸಂಪರ್ಕಿಸಿ ಮಾಹಿತಿ ನೀಡಿ ಎಂದು ಎಸ್‌ಪಿ ರೋಹನ್ ಜಗದೀಶ್ ಸಾರ್ವಜನಿಕರಲ್ಲಿ ಕೋರಿದ್ದಾರೆ.

ಪ್ರಕರಣದಲ್ಲಿ ಭಾಗಿಯಾದ ಮೂವರು ಆರೋಪಿಗಳಾದ 1-ಜಿ. ಸತೀಶಗೌಡ (35, ಯರಗೊಪ್ಪಾ, ಬಾಗಲಕೋಟೆ), 2-ಲಕ್ಷಣ ಯಲ್ಲಪ್ಪ ಮೊಣಕೇರ (25, ಬೆಳ್ಳಟ್ಟಿ, ಗದಗ), 3-ಚಂದ್ರ@ ಕುರಡಚಂದ್ರ (ಹಗಲಿಬೊಮ್ಮನಹಳ್ಳಿ, ವಿಜಯನಗರ) ಇವರ ಪೈಕಿ ಇಬ್ಬರನ್ನು ಬಂಧಿಸಲಾಗಿದೆ. ಜೊತೆಗೆ, ಲಕ್ಷ್ಮೇಶ್ವರ, ಶಿರಹಟ್ಟಿ, ಮುಳಗುಂದ ಮತ್ತು ಮುಂಡರಗಿ ಪೊಲೀಸ್ ಠಾಣಾ ವ್ಯಾಪ್ತಿಗಳಲ್ಲಿ ಮನೆಗಳ್ಳತನ ಹಾಗೂ ಮೋಟಾರ್ ಸೈಕಲ್ ಕಳ್ಳತನ ಮಾಡಿದ ಪ್ರಕರಣಗಳಲ್ಲಿ ಆರೋಪಿತರಿಂದ 12 ಲಕ್ಷ ರೂ ಮೌಲ್ಯದ 122.5 ಗ್ರಾಂ ಬಂಗಾರದ ವಸ್ತುಗಳನ್ನು ವಶಕ್ಕೆ ಪಡೆಯಲಾಗಿದ್ದು, 20 ಸಾವಿರ ರೂ ಮೌಲ್ಯದ 150 ಗ್ರಾಂ ಬೆಳ್ಳಿಯ ಆಭರಣಗಳು, 2 ಸಾವಿರ ರೂ ಮೊತ್ತದ ಎರಡು ಮೊಬೈಲ್, 28 ಸಾವಿರ ರೂ ಮೌಲ್ಯದ 2 ಲ್ಯಾಪ್ಟಾಪ್‌ಗಳು, 4 ಬೈಕ್‌ಗಳೂ ಸೇರಿ ಒಟ್ಟು 14 ಲಕ್ಷ 50 ಸಾವಿರ ರೂ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

ಪ್ರಕರಣ ಭೇದಿಸುವಲ್ಲಿ ಶ್ರಮಿಸಿದ ಅಧಿಕಾರಿಗಳಿಗೆ ಸೂಕ್ತ ಬಹುಮಾನ ನೀಡಲಾಗುವುದು ಎಂದು ಎಸ್‌ಪಿ ರೋಹನ್ ಜಗದೀಶ್ ಘೋಷಣೆ ಮಾಡಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಸಿಇಎನ್ ಡಿಎಸ್‌ಪಿ ಮಹಾಂತೇಶ ಸಜ್ಜನ, ಡಿಎಸ್‌ಪಿ ಮುರ್ತುಜಾ ಖಾದ್ರಿ ಅವರ ಮಾರ್ಗದರ್ಶನದಲ್ಲಿ ಶಿರಹಟ್ಟಿ ಸಿಪಿಐ ನಾಗರಾಜ ಮಾಢಳ್ಳಿ ನೇತೃತ್ವದ ತಂಡದಲ್ಲಿ ಮುಳಗುಂದ ಪಿಐ ಸಂಗಮೇಶ ಶಿವಯೋಗಿ, ಪಿಎಸ್‌ಐ ಟಿ.ಕೆ. ರಾಠೋಡ, ಪಿಎಸ್‌ಐ ಚನ್ನಯ್ಯ ದೇವೂರ, ಪಿಎಸ್‌ಐ ನಾಗರಾಜಗಡದ, ಪಿಎಸ್‌ಐ ಶೇಖರ ಕಡಬಿನ, ಸಿಬ್ಬಂದಿಗಳಾದ ಆರ್. ಎಸ್. ಯರಗಟ್ಟಿ, ಎನ್.ಎ. ಮೌಲ್ವಿ, ಎಂ.ಎ. ಶೇಖ, ಎಂ.ಎಸ್. ಬಳ್ಳಾರಿ, ಎ.ಆರ್. ಕಮ್ಮಾರ, ಡಿ.ಎಸ್. ನದಾಫ್, ಪಾಂಡುರಂಗರಾವ್, ಎಚ್.ಐ. ಕಲ್ಲಣ್ಣವರ, ಎಂ.ಆರ್. ಧಾರವಾಡ, ಹನಮಂತ ದೊಡ್ಡಮನಿ, ಸೋಮು ರಾಮಗೇರಿ, ಬಸವರಾಜ ಮುಳಗುಂದ, ಸುದರ್ಶನ ಚೌಕಾ, ಜಾಫರ್ ಬಚ್ಚೇರಿ, ಆನಂದಸಿಂಗ್ ದೊಡ್ಡಮನಿ, ಗುರು ಬೂದಿಹಾಳ, ಸಂಜು ಕೊರಡೂರ ಪಾಲ್ಗೊಂಡಿದ್ದರು.

### ಸರ್ಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಸಿ.ಎಂ ಸಿದ್ದರಾಮಯ್ಯ

# ಸಮಾಜದ ಋಣ ತೀರಿಸುವ ಕೆಲಸ ಮಾಡಿ

■ವಿಜಯಸಾಕ್ಷಿ ಸುದ್ದಿ, ಮೈಸೂರು

ಪ್ರತಿಭೆ ಯಾರ ಸೊತ್ತೂ ಅಲ್ಲ. ಅವಕಾಶ ಸಿಕ್ಕರೆ ಪ್ರತಿಭೆಗಳು ಹೊರಗೆ ಬರತ್ತವೆ. ಮಕ್ಕಳ ಪ್ರತಿಭೆ ರೂಪುಗೊಳ್ಳಲು ಶಿಕ್ಷಕರಷ್ಟೇ ಪೋಷಕರ ಶ್ರಮ ಕೂಡ ಅಗತ್ಯ. ಸಿಕ್ಕ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳದಿದ್ದರೆ ಯಾರನ್ನೂ ದೂರಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು. ರಾಜ್ಯ ಸರ್ಕಾರಿ ನೌಕರರ ಸಂಘ ಆಯೋಜಿಸಿದ್ದ ಸರ್ಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸರ್ಕಾರಿ ನೌಕರರು ಜಾತಿ, ಧರ್ಮ ಮಾಡಬಾರದು. ಇದು ನಿಮ್ಮ ವೃತ್ತಿಗೆ ಮಾಡುವ ಅವಮಾನ. ನಮ್ಮ ಮೇಲೆ, ಸರ್ಕಾರಿ ನೌಕರರ ಮೇಲೆ ಸಮಾಜದ ಋಣ ಇದೆ. ಅಪ್ಪ-ಅಮ್ಮ ಖರ್ಚು ಮಾಡಿದ ಹಣದಲ್ಲಿ ನೀವೆಲ್ಲಾ ಸರ್ಕಾರಿ ನೌಕರರಾಗಲು ಸಾಧ್ಯವಿಲ್ಲ. ನಾವು ಶಾಸಕರಾಗಲು, ಮಂತ್ರಿಗಳಾಗಲು ಸಾಧ್ಯವಿಲ್ಲ. ಜನರ ತೆರಿಗೆ ಹಣದಲ್ಲಿ ನಾವೆಲ್ಲಾ ಬದುಕಿದ್ದೇವೆ. ಹೀಗಾಗಿ ಸಮಾಜದ, ಎಲ್ಲಾ ಜಾತಿ, ಧರ್ಮದವರ ಋಣವೂ ನಮ್ಮ ಮೇಲಿದೆ. ಈ ಋಣ ಪ್ರಜ್ಞೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದರು.



ಏಳನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಯಥಾವತ್ತಾಗಿ ಜಾರಿ ಮಾಡಿದ್ದೇನೆ. ಒಪಿಎಸ್ ಜಾರಿ ಕುರಿತಾಗಿ ಸಮಿತಿ ವರದಿ ಕೊಟ್ಟ ಬಳಿಕ ಸೂಕ್ತ ನಿರ್ಧಾರ ಕೈಗೊಳ್ಳುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

> ನಮಗೆ ವಿಶ್ವ ಮಾನವರಾಗುವ ಅವಕಾಶ ಇದೆ. ಅಲ್ಪ ಮಾನವರಾಗುವುದು ಬೇಡ. ಹುಟ್ಟು ಆಕಸ್ಮಿಕ. ಸಾವು ಗ್ಯಾರಂಟಿ. ಆದ್ದರಿಂದ ಸಮಾಜದ ಋಣ ತೀರಿಸಿ ಬದುಕನ್ನು ಸಾರ್ಥಕ ಮಾಡಿಕೊಳ್ಳಬೇಕು. ಶಿಕ್ಷಕರು, ಸೈನಿಕರು, ರೈತರು ನಮ್ಮ ಬದುಕನ್ನು ಹಸನು ಮಾಡಿದ್ದಾರೆ. ಈ ಮೂವರ ಋಣ ತೀರಿಸುವ ಕೆಲಸ ನಾವು ಮಾಡಬೇಕಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ಸರ್ಕಾರಿ ನೌಕರರ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಸಿದ್ಧವಿದೆ. ನಿಮ್ಮ ಬೇಡಿಕೆಗಳ ಈಡೇರಿಕೆಗೆ ಸದಾ ತೆರೆದ ಮನಸ್ಸಿನಿಂದ ಇರುತ್ತೇನೆ. ಹಾಗೆಯೇ ಸರ್ಕಾರದ ಕಾರ್ಯಕ್ರಮಗಳನ್ನು ಜನರಿಗೆ ತಲುಪಿಸುವ ಕೆಲಸವನ್ನು, ಈ ಜವಾಬ್ದಾರಿಯನ್ನೂ ನೀವು ಪರಿಣಾಮಕಾರಿಯಾಗಿ ಜನರಿಗೆ, ಫಲಾನುಭವಿಗಳಿಗೆ ತಲುಪಿಸಿ ಎಂದರು.

## ಹೆಚ್ಚಿನ ಸಂಖ್ಯೆಯಲ್ಲಿ ರಕ್ತದಾನ ಮಾಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರದ ಸಮುದಾಯ ಆರೋಗ್ಯ ಕೇಂದ್ರಕ್ಕೆ ನೆರೆಯ ಸವಣೂರ, ಶಿಗ್ಗಾಂವ, ಕುಂದಗೋಳ, ಶಿರಹಟ್ಟಿ ತಾಲೂಕಿನಿಂದ ನಿತ್ಯ ನೂರಾರು ರೋಗಿಗಳು ಚಿಕಿತ್ಸೆಗೆ ಬರುತ್ತಾರೆ. ಅಪಘಾತ, ಹೆರಿಗೆ ಮತ್ತು ಅಗತ್ಯ ಸಂದರ್ಭಗಳಲ್ಲಿ ಹುಬ್ಬಳ್ಳಿ, ಗದುಗಿಗೆ ಹೋಗಲೇಬೇಕಾದ ಅನಿವಾರ್ಯತೆ ಇತ್ತು. ಅಲ್ಲದೇ ಖಾಸಗಿ ಆಸತ್ರೆಗಳಲ್ಲಿ ಚಿಕಿತ್ಸೆಗೊಳಪಡುವ ರೋಗಿಗಳಿಗೆ ಈ ಬ್ಲಡ್ ಬ್ಯಾಂಕ್‌ನಿಂದ ಸಾಕಷ್ಟು ಉಪಯೋಗವಾಗಲಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಶನಿವಾರ ರಕ್ತ ಸಂಗ್ರಹಣಾ ಘಟಕವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಕ್ತ ಸಂಗ್ರಹಣಾ ಘಟಕದ ಬೇಡಿಕೆ ಹತ್ತಾರು ವರ್ಷಗಳದ್ದಾಗಿದೆ. ಇದೀಗ ಘಟಕ ಕಾರ್ಯಾರಂಭಗೊಂಡಿದ್ದು, ಈ ಭಾಗದ ಯುವಕ ಮತ್ತು ಕನ್ನಡಪರ ಸಂಘಟನೆಗಳಿಂದ ಆಗಾಗ ರಕ್ತದಾನದ ಶಿಬಿರಗಳು ನಡೆಯಬೇಕು. ರಕ್ತದಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ರಕ್ತದಾನ ಮಾಡಬೇಕು. ಅಂದಾಗ ಮಾತ್ರ ಜಿಮ್ಸ್‌ನಿಂದ ಲಕ್ಷ್ಮೇಶ್ವರದ ರಕ್ತ ಸಂಗ್ರಹಣಾ ಘಟಕಕ್ಕೆ ಅಗತ್ಯ ಸಂದರ್ಭದಲ್ಲಿ ರಕ್ತ ಕಳುಹಿಸಿಕೊಡುತ್ತಾರೆ ಎಂದರು.



ಈ ವೇಳೆ ಗದಗ ಜಿಲ್ಲಾ ರಕ್ತ ಸಂರಕ್ಷಣಾ ಅಧಿಕಾರಿ (ಡಿಟಿಓ) ಆರುಂಧತಿ ಕುಲಕರ್ಣಿ ರಕ್ತದಾನದ ಮಹತ್ವ ಮತ್ತು ಮಹಿಳೆಯರ ಆರೋಗ್ಯಕರ ಜೀವನದ ಬಗ್ಗೆ ಮಾತನಾಡಿದರು. ತಾಲೂಕಾ ವೈದ್ಯಾಧಿಕಾರಿ (ಟಿಹೆಚ್‌ಓ) ಡಾ. ಸುಭಾಸ ದಾಯಗೊಂಡ ಬ್ಲಡ್ ಸ್ಟೋರೇಜ್ ಯುನಿಟ್‌ನ ಕಾರ್ಯ ನಿರ್ವಹಣೆ ಬಗ್ಗೆ ಮಾಹಿತಿ ನೀಡಿದರು. ಡಾ. ಶ್ರೀಕಾಂತ ಕಾಟೇವಾಲೆ, ಡಾ. ಪಿ.ಡಿ. ತೋಟದ, ಡಾ. ಗುರುರಾಜ ಸಜ್ಜನ, ಡಾ. ಮಲ್ಲಿಕಾರ್ಜುನ ಪಟ್ಟಣಶೆಟ್ಟಿ, ಲ್ಯಾಬ್ ಟೆಕ್ನಿಷಿಯನ್ ವಿಜಯ ಮಾಂಡ್ರೆ, ಗಂಗಾಧರ ಮೆಣಸಿನಕಾಯಿ, ಪ್ರವೀಣ ಬೋಮಲೆ, ದುಂಡೇಶ ಕೊಟಗಿ, ವಿಜಯ ಮೆಕ್ಕಿ, ವಿಜಯ ಕರಡಿ, ಶರಣು ಗೋಡಿ, ಇಸ್ಮಾಯಿಲ್ ಆಡೂರ, ಫಕ್ಕಿರೇಶ ಜಂತ್ಲಿ ಸೇರಿ ಹಲವರಿದ್ದರು.

### ಜು.27ಕ್ಕೆ ಮೂರನೇ ಕಣ್ಣಿನ ಕಲೆಯ ಕುರಿತು ಉಚಿತ ಪ್ರದರ್ಶನ ಶಿಬಿರ: ಸುರೇಶಕುಮಾರ ಗುರೂಜಿ

# ಮಕ್ಕಳ ಮನೋವಿಕಾಸಕ್ಕೆ ಪೂರಕ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ನೆಲದನುಡಿ ಟ್ರಸ್ಟ್ ಆಶ್ರಯದಲ್ಲಿ ಸಾಕ್ರೇಡ್ ಎನ್‌ಲೈಟ್ ಅಕಾಡೆಮಿಯಿಂದ ಮೂರನೇ ಕಣ್ಣಿನ ಕಲೆ ಕುರಿತು, ಆರನೇ ಇಂದ್ರಿಯದ ಬಗ್ಗೆ 5ರಿಂದ 16 ವರ್ಷದ ವಯಸ್ಸಿನವರಿಗೆ ನಗರದಲ್ಲಿ ಉಚಿತ ಡೆಮೋ (ಪ್ರದರ್ಶನ) ಶಿಬಿರವನ್ನು ಜುಲೈ 27ರಂದು ಏರ್ಪಡಿಸಲಾಗಿದೆ ಎಂದು ಋಷಿಕೇಶ ಗುರುಕುಲಂ ಟ್ರಸ್ಟ್ ಅಧ್ಯಕ್ಷರಾದ ಸುರೇಶಕುಮಾರ ಗುರೂಜಿ ಹೇಳಿದರು.

ಅವರು ನಗರದ ಪತ್ರಿಕಾಭವನದಲ್ಲಿ ಶನಿವಾರ ಈ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಮಕ್ಕಳಿಗೆ ಕಣ್ಣು ಮುಚ್ಚಿಸಿ ಕಣ್ಣಿನ ಮೇಲೆ ಪಟ್ಟಿ ಕಟ್ಟಿದಾಗಲೂ 6ನೇ ಇಂದ್ರಿಯ, ಥರ್ಡ್ ಐ (ಚಿತ್ತ) ಸಂಯಮ ಶಕ್ತಿಯಿಂದ ಬಣ್ಣ, ವಸ್ತುಗಳನ್ನು, ಉಡುಗೆ-ತೊಡುಗೆಗಳನ್ನು ಗುರುತಿಸುವ, ಓಡುವ, ಓದುವ, ಆಟ ಆಡುವ, ಬರೆಯುವ, ಬಣ್ಣ ಹಾಕುವ, ಚಿತ್ರ ಬಿಡಿಸುವ ಇತ್ಯಾದಿ ಚಟುವಟಿಕೆಗಳನ್ನು ಮಾಡಿ ಧನಾತ್ಮಕ ಸ್ಫೂರ್ತಿಯನ್ನು ಈ ವಿದ್ಯೆಯಿಂದ ಪಡೆದುಕೊಳ್ಳುತ್ತಾರೆ. 5ರಿಂದ 16 ವರ್ಷದ ಮಕ್ಕಳಿಗಾಗಿ ವಿನ್ಯಾಸಗೊಳಿಸಲಾದ ಈ ಕಾರ್ಯಕ್ರಮ ಮಕ್ಕಳ ಮನೋವಿಕಾಸಕ್ಕೆ ಪೂರಕವಾಗಿದೆ ಎಂದರು.

ನೆಲದನುಡಿ ಟ್ರಸ್ಟ್ ಅಧ್ಯಕ್ಷೆ ರಜಿಯಾಬೇಗಂ ಮಕಾನದಾರ ಮಾತನಾಡಿ, ಈ ವಿದ್ಯೆಯಿಂದ ಮಕ್ಕಳಲ್ಲಿ ಗ್ರಹಿಸುವ ಶಕ್ತಿಯನ್ನು ಗಣನೀಯವಾಗಿ ಹೆಚ್ಚಿಸುತ್ತದೆ. ಮಗುವಿನಲ್ಲಿ ದಿವ್ಯದೃಷ್ಟಿ ಜಾಗೃತಗೊಳ್ಳುತ್ತದೆ. ಶೈಕ್ಷಣಿಕ ಬುದ್ಧಿವಂತಿಕೆ ಚುರುಕುಗೊಳ್ಳುತ್ತದೆ. ಅತಿಯಾದ ಮೊಬೈಲ್ ಹಾಗೂ ಟಿವಿ ಬಳಕೆಯನ್ನು ನಿಯಂತ್ರಿಸಬಹುದು. ಮಗುವಿನ ಸುಪ್ತ ಶಕ್ತಿಯ ಸಾಮರ್ಥ್ಯ ಪಾಲಕರ ಗಮನಕ್ಕೂ ಬರುತ್ತದೆ. ಮಕ್ಕಳು ಹೊಸ ಚೈತನ್ಯ, ಉಲ್ಲಾಸ ಹೊಂದುವರು. ಮಕ್ಕಳಲ್ಲಿ ಲವಲವಿಕೆಯ ಚಟುವಟಿಕೆ ಉಂಟಾಗಿ ಸೋಮಾರಿತನ, ಹಠಮಾರಿತನ, ಒರಟುತನ ಕಡಿಮೆಯಾಗುತ್ತದೆ. ಮಕ್ಕಳಲ್ಲಿ ಆಸಕ್ತಿ, ಏಕಾಗ್ರತೆ, ನೆನಪಿನ ಶಕ್ತಿ ಬೆಳೆಯುತ್ತದೆ ಎಂದರು.




> ಈ ಡೆಮೋ ಶಿಬಿರದಲ್ಲಿ ಪಾಲ್ಗೊಂಡು ಈ ಬಗ್ಗೆ ತಿಳಿದುಕೊಂಡು, ಮಕ್ಕಳ ಭವಿಷ್ಯ ಇನ್ನಷ್ಟು ಉಜ್ವಲಗೊಳ್ಳುವಂತೆ ಮಾಡುವ ದೃಷ್ಟಿಯಿಂದ ಆಸಕ್ತ ಪಾಲಕರು ಹಾಗೂ ಮಕ್ಕಳು ಶಿಬಿರದಲ್ಲಿ ಪಾಲ್ಗೊಳ್ಳಬಹುದಾಗಿದೆ. ಭಾಗವಹಿಸುವವರು ಮುಂಚಿತವಾಗಿ ಹೆಸರು ನೋಂದಾಯಿಸಬೇಕು.
>
> ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ ನೆಲದನುಡಿ ಟ್ರಸ್ಟ್ ಅಧ್ಯಕ್ಷರಾದ ರಜಿಯಾಬೇಗಂ ಮಕಾನದಾರ ಇವರನ್ನು (ಮೊ-9141102826) ಸಂಪರ್ಕಿಸಬಹುದಾಗಿದೆ.

ಈ ಪ್ರಕ್ರಿಯೆಗಳಿಂದ ಮಕ್ಕಳಲ್ಲಿ ವಿಶೇಷ ಆಂತರಿಕ ಶಾಂತತೆ ಉಂಟಾಗಿ ಮನಸ್ಸು ಶುದ್ಧಗೊಂಡು, ದೃಷ್ಟಿಕೋನದಲ್ಲಿ ಸ್ಪಷ್ಟತೆ ಉಂಟಾಗುತ್ತದೆ. ಪೋಷಕರಿಗೆ ಮಕ್ಕಳು ಒಂದು ಕಡೆ ಕೂಡುತ್ತಿಲ್ಲ, ಏಕಾಗ್ರತೆಯಿಲ್ಲ ಎನ್ನುವ ಎಲ್ಲಾ ಸಂಕಟಗಳು ಗಣನೀಯವಾಗಿ ದೂರಗೊಳ್ಳುತ್ತವೆ. ಇಂಥ ಸಾಧನೆಯಲ್ಲಿರುವ ಮಕ್ಕಳಿಂದ ಈ ಭಾಗದ ಮಕ್ಕಳಿಗೆ ಇದರ ಉಪಯೋಗ ಲಭಿಸಬೇಕು ಎನ್ನುವ ಕಾರಣಕ್ಕೆ ಡೆಮೊ ಕ್ಲಾಸ್ ಆಯೋಜಿಸಲಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಯೋಗಸಾಧಕಿ ರಾಧಾ ಮಾತಾಜಿ, ಶಿಬಿರ ಸಂಚಾಲಕರಾದ ಮಾ ವಜ್ರೇಶ್ವರಿ ಫೌಂಡೇಶನ್ ಅಧ್ಯಕ್ಷೆ ಡಾ. ಸುವರ್ಣಾ ನಿಡಗುಂದಿ, ಪತ್ರಕರ್ತ ವೆಂಕಟೇಶ ಇಮರಾಪೂರ, ತೋಟಯ್ಯ ಗುಡ್ಡಿಮಠ, ಅಲ್ತಾಫ್ ಲಕ್ಷ್ಮೇಶ್ವರ ಮುಂತಾದವರು ಇದ್ದರು.

## ನರಗುಂದ: ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನರಗುಂದ ಪುರಸಭೆ ವ್ಯಾಪ್ತಿಯಲ್ಲಿ ಬರುವ ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ ಭಾರತ ಸರ್ಕಾರ ನವದೆಹಲಿ ಅವರು ನ್ಯೂ ಅರ್ಬನ್ ಪ್ಯೂವರ್ಟಿ ಅಲಿವೇಷನ್ ಮಿಷನ್ ಅಭಿಯಾನವನ್ನು ಅನುಷ್ಠಾನಗೊಳಿಸಲು ಯೋಜನೆ ರೂಪಿಸುತ್ತಿದೆ.

2025–26ನೇ ಸಾಲಿನ ರಾಷ್ಟ್ರೀಯ ಜೀವನೋಪಾಯ ಅಭಿಯಾನ ನಿರ್ದೇಶಕರ ಪತ್ರದನ್ವಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಸಾರಿಗೆ ಕಾರ್ಮಿಕರು, ಗಿಗ್ ಕೆಲಸಗಾರರು, ಸ್ವಿಗ್ಗಿ, ಝೋಮ್ಯಾಟೊ, ಮಿಷೋ, ಅಮೆಜಾನ್, ಪ್ಲಿಪ್ ಕಾರ್ಟ್, ಮತ್ತು ಆರೈಕೆ ಕೆಲಸಗಾರರು, ತ್ಯಾಜ್ಯ ಕೆಲಸಗಾರರು, ಮನೆ ಕೆಲಸಗಾರರು, ಸಾರಿಗೆ ಕಾರ್ಮಿಕರು, ಅಂಗನವಾಡಿ ಸಹಾಯಕರು, ವಿಕಲಚೇತನರು, ಮತ್ತು ವಿಷೇಶಚೇತನರ ಆರೈಕೆದಾರರು, ಆರೋಗ್ಯ ಇಲಾಖೆ, ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಆರೈಕೆದಾರರು ಆಶಾ ಕಾರ್ಯಕರ್ತರು , ಖಾಸಗಿ ಆಸ್ಪತ್ರೆಗಳ ಸಂಘ /ಸಂಸ್ಥೆಗಳು ರೈಲ್ವೆ ಮತ್ತು ಬಸ್ ನಿಲ್ದಾಣದಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರ ಸಂಘ, ಆಟೋ ರಿಕ್ಷಾ ಸಂಘ ಸಂಸ್ಥೆಗಳು, ಸರಕು ಸಾಗಾಣಿಕೆ ವಾಹನ ಚಾಲಕರ ಸಂಘ ಇತ್ಯಾದಿ ಕಾರ್ಮಿಕರ ದತ್ತಾಂಶ ಸಂಗ್ರಹಣೆ ಮಾಡಲು ಅಭಿಯಾನ ನಿರ್ದೇಶಕರ ನಿರ್ದೇಶದನ್ವಯ ದಿನಾಂಕ: 30.07.2025 ಕಚೇರಿ ವೇಳೆಯಲ್ಲಿ ದಾಖಲೆಗಳನ್ನು ಸಲ್ಲಿಸಲು ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ನರಗುಂದ ಪುರಸಭೆಯ ಡೇ–ನಲ್ಮ್ ವಿಭಾಗದಲ್ಲಿ ಕೇಳಿ ಪಡೆಯಬಹುದಾಗಿದೆ ಎಂದು ನರಗುಂದ ಪುರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

## ಭೀಕರ ಅಪಘಾತ: ಇರಾನ್ ನಲ್ಲಿ ಬಸ್ ಪಲ್ಟಿಯಾಗಿ 21 ಮಂದಿ ಸಾವು!

■ವಿಜಯಸಾಕ್ಷಿ ಸುದ್ದಿ, ಟೆಹ್ರಾನ್

ಪ್ರಾಂತ್ಯದ ರಾಜಧಾನಿಯಾದ ದಕ್ಷಿಣ ಶಿರಾಜ್‌ನಲ್ಲಿ ಬಸ್ ಉರುಳಿಬಿದ್ದು 21 ಮಂದಿ ಸಾವನ್ನಪ್ಪಿದ್ದು, 34 ಜನರು ಗಾಯಗೊಂಡಿರುವ ಘಟನೆ ಜರುಗಿದೆ.

ಈ ಬಗ್ಗೆ ಫಾರ್ಸ್ ಪ್ರಾಂತ್ಯದ ತುರ್ತು ಸಂಸ್ಥೆಯ ಮುಖ್ಯಸ್ಥ ಮಸೌದ್ ಅಬೆದ್ ಸ್ಪಷ್ಟನೆ ಕೊಟ್ಟಿದ್ದಾರೆ. ಈ ಅಪಘಾತದ ಕಾರಣ ಇನ್ನೂ ತನಿಖೆಯಲ್ಲಿದೆ. ಅಪಘಾತವು ಬೆಳಿಗ್ಗೆ 11.05ರ ಸುಮಾರಿಗೆ ಸಂಭವಿಸಿದೆ. ರಕ್ಷಣಾ ಪಡೆಗಳು ತಕ್ಷಣವೇ ಸ್ಥಳಕ್ಕೆ ಧಾವಿಸಲಾಗಿದ್ದು, ಅಪಘಾತದ ಕಾರಣವನ್ನು ತನಿಖೆ ನಡೆಸಲಾಗುತ್ತಿದೆ.

ಕಾರ್ಯಾಚರಣೆ ಪೂರ್ಣಗೊಂಡ ನಂತರ ಮತ್ತು ವಿವರವಾದ ತನಿಖೆ ನಡೆಸಿದ ನಂತರ ಹೆಚ್ಚುವರಿ ಮಾಹಿತಿ ಮತ್ತು ಅಂತಿಮ ಸಾವಿನ ಸಂಖ್ಯೆಯನ್ನು ಘೋಷಿಸಲಾಗುವುದು ಎಂದು ತಿಳಿಸಿದ್ದಾರೆ.

### ಎಲ್ಲದರ ಜೊತೆಗೆ ಸಾಮಾಜಿಕ ಜವಾಬ್ದಾರಿಯನ್ನು ಅರಿತು ಬದುಕುವುದು ಮುಖ್ಯ

# ಜವಾಬ್ದಾರಿಗಳೇ ಜೀವನದ ಜೀವಾಳ




ಜೀವನ ಎಂದರೆ ಏನು ಎನ್ನುವ ಪ್ರಶ್ನೆಗೆ ಹಲವರು ಹಲವಾರು ರೀತಿಯಲ್ಲಿ ತಮ್ಮದೇ ಆದ ದೃಷ್ಟಿಕೋನದಲ್ಲಿ ಅರ್ಥೈಸುತ್ತಾರೆ. ಅದು ಅವರ ವಿಚಾರಧಾರೆಗಳು, ಬದುಕುವ ರೀತಿ, ಸನ್ನಿವೇಶಗಳನ್ನು ಆಧರಿಸಿವೆ. ಪ್ರತಿಯೊಬ್ಬ ವ್ಯಕ್ತಿಯ ಜೀವನದಲ್ಲಿ ನಡೆಯುವ ಘಟನೆಗಳು, ಸಿಗುವ ಅವಕಾಶಗಳು, ಎದುರಿಸಿದ ಕಷ್ಟ–ಸುಖ, ನೋವು–ನಲಿವು ಹೀಗೆ ಎಲ್ಲವನ್ನು ಒಳಗೊಂಡಂತೆ ಅವರ ಅನುಭವದ ಆಧಾರದ ಮೇಲೆ ಅವರವರ ದೃಷ್ಟಿಕೋನದಲ್ಲಿ ವಿಶ್ಲೇಷಿಸುತ್ತಾರೆ.

ಕೆಲವರು ಜೀವನವನ್ನು ತುಂಬಾ ಅರ್ಥಪೂರ್ಣವಾಗಿ, ಜವಾಬ್ದಾರಿಯಿಂದ ನಿಭಾಯಿಸಿ ಇತರರಿಗೆ ಮಾದರಿಯಾದರೆ, ಇನ್ನೂ ಕೆಲವರು ಸೋಮಾರಿತನದ ವರ್ತನೆಯನ್ನು ತೋರಿ, ಬೇಜವಾಬ್ದಾರಿಯಿಂದ ನಿಷ್ಪ್ರಯೋಜಕರಾಗಿ ಬಾಳುತ್ತಾರೆ. ಇಲ್ಲಿ ಯಾರು ಹೇಗೆ ಜೀವಿಸುತ್ತಾರೆ ಎನ್ನುವುದು ಮುಖ್ಯವಲ್ಲ. ಅವರವರ ಜೀವನದ ಅಗತ್ಯತೆಗಳು, ಅವಶ್ಯಕತೆ, ಉದ್ದೇಶಗಳನ್ನು ಆಧರಿಸಿದೆ. ಎಲ್ಲದರ ಜೊತೆಗೆ ಸಾಮಾಜಿಕ ಜವಾಬ್ದಾರಿಯನ್ನು ಅರಿತು ಬದುಕುವುದು ಮುಖ್ಯವಾಗುತ್ತದೆ.

ಅನಿರೀಕ್ಷಿತವಾಗಿ ಬಂದೆರಗುವ ಜೀವನದ ಏರಿಳಿತಗಳನ್ನು ಸಮಾನವಾಗಿ ಸ್ವೀಕರಿಸಿ ದೃಢ ಚಿತ್ತತೆಯಿಂದ ಬದುಕುವುದು ಕೂಡ ಒಂದು ಕಲೆ. ಇತರರಿಗೆ ಧಕ್ಕೆ ಆಗದಂತೆ ವಿಶಾಲ ಮನೋಭಾವನೆಯಿಂದ ಬದುಕುವುದು ಮಾನವೀಯತೆಯ ಪ್ರತೀಕ. ಇಂತಹ ವ್ಯಕ್ತಿ ಸಮಾಜದಲ್ಲಿ ಮತ್ತೊಬ್ಬರಿಗೆ ಆದರ್ಶಪ್ರಾಯ, ಅನುಕರಣೀಯ ವ್ಯಕ್ತಿಯಾಗುತ್ತಾನೆ.

ಒಬ್ಬ ಮನೆಯ ಯಜಮಾನ ಕುಟುಂಬದ ಸಂಪೂರ್ಣ ಹೊಣೆಗಾರಿಕೆಯನ್ನು ಹೊತ್ತು, ಮನೆಯ ಎಲ್ಲಾ ಸದಸ್ಯರ ಬೇಕು ಬೇಡಿಕೆಗಳಿಗೆ ಸ್ಪಂದಿಸುತ್ತಾನೆ. ಅದು ಆ ವ್ಯಕ್ತಿಯ ಜವಾಬ್ದಾರಿ. ಹಾಗೆಯೇ ವಿವಿಧ ಕ್ಷೇತ್ರದಲ್ಲಿ ಅಧಿಕಾರಿ ವರ್ಗದವರು ಆಯಾ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಿದಾಗ ಅಲ್ಲಿಯ ಪ್ರಗತಿಯನ್ನು ಕಾಣಲಾಗುತ್ತದೆ.

ಒಬ್ಬ ಅರಸ ಬಹುದೊಡ್ಡ ಸುಂದರವಾದ ಮನೆಯನ್ನು ಕಟ್ಟಲು ಯೋಚಿಸಿದ. ಹಾಗೆ ಆ ಮನೆ ಕಟ್ಟಡವನ್ನು ಪ್ರಾರಂಭಿಸಿದ. ತಾನು ಕಟ್ಟಿಸುವ ಅರಮನೆಯ ಮೂಲ ಕಂಬ ತುಂಬಾ ಚೆನ್ನಾಗಿರಬೇಕು ಮತ್ತು ಗುಣಮಟ್ಟದಾಗಿರಬೇಕು ಎಂದು ಹಲವು ರೀತಿಯಲ್ಲಿ ವಿಚಾರಿಸಿದ. ಅದಕ್ಕಾಗಿ ತನಗೆ ಗೊತ್ತಿರುವ ಎಲ್ಲಾ ಕಡೆಯೂ ವಿಚಾರಿಸಿದ. ಹಲವು ತಿಂಗಳುಗಳ ನಂತರ ಆ ಮೂಲ ಕಂಬವನ್ನು ಹುಡುಕಿ ಕೊನೆಗೂ ಅದನ್ನು ಅರಮನೆಗೆ ತರಿಸುವ ವ್ಯವಸ್ಥೆಯನ್ನು ಮಾಡಿದ. ಆ ಕಂಬಕ್ಕೆ ಒಬ್ಬ ಒಳ್ಳೆಯ ಶಿಲ್ಪಿಯಿಂದ ಸುಂದರವಾದ ಆಕಾರವನ್ನು ಮಾಡಿಸಿದ.

ಅರಮನೆಯ ಎಲ್ಲಾ ಭಾಗದ ಭಾರವನ್ನು ಆ ಕಂಬವೇ ಹೊರಬೇಕಾಗಿತ್ತು. ಹಾಗಾಗಿ ಅರಸನು ತುಂಬಾ ಜಾಗರೂಕತೆಯಿಂದ ಆ ಮೂಲಕಂಭವನ್ನು ಗಟ್ಟಿಮುಟ್ಟಾದ ರೀತಿಯಲ್ಲಿ ತಯಾರು ಮಾಡಿಸಿದ. ನಂತರ ಆ ಅರಮನೆಯ ಕಟ್ಟುವಾಗ ಮಧ್ಯಭಾಗದಲ್ಲಿ ಆ ಮೂಲಕ ನಿಲ್ಲಿಸಿ, ಸುಂದರವಾದ ಅರಮನೆಯನ್ನು ಕಟ್ಟಿಸಿದ. ಹೀಗೆ ಈ ಮಹಾರಾಜ ಕಟ್ಟಿಸಿದ ಅರಮನೆಯ ಮೂಲ ಕಂಬದ ಖ್ಯಾತಿ ಎಲ್ಲಾ ಕಡೆ ಹರಡಿತು. ಈ ವಿಷಯ ತಿಳಿದ ಒಬ್ಬ ಜ್ಞಾನಿ, ಆ ಕಂಬವನ್ನು ನೋಡಲೇಬೇಕು ಎಂದು ನಿರ್ಧರಿಸಿ, ಅರಸನ ಅರಮನೆಗೆ ಬಂದನು. ಆಗ ಅರಮನೆ ಪ್ರವೇಶಿಸುತ್ತಿದ್ದಂತೆ ಆ ಕಂಬವನ್ನು ನೋಡಿದ ತಕ್ಷಣ ತುಂಬಾ ಸಂತೋಷಗೊಂಡ. ಕಾರಣ ಆ ಕಂಬವು ತುಂಬಾ ಆಕರ್ಷಕವಾಗಿತ್ತು. ಹಾಗೆಯೇ ಆ ಜ್ಞಾನಿಯು ಕಂಬಕ್ಕೆ ಕಿವಿಗೊಟ್ಟು ಕಂಬವನ್ನು ಹೀಗೆ ಕೇಳುತ್ತಾನೆ 'ನಿನ್ನನ್ನೇಕೆ ಜನರು ಇಷ್ಟು ಸಡಗರದಿಂದ ನೋಡುತ್ತಿದ್ದಾರೆ?'

ಆಗ ಆ ಮೂಲಕಂಬ ಹೇಳಿತು, ನಾನು ಈ ಅರಮನೆಯ ಬಾರದ ಸಂಪೂರ್ಣ ಜವಾಬ್ದಾರಿ ಹೊತ್ತಿದ್ದೇನೆ. ಅಲ್ಲದೆ ಈ ಅರಮನೆಯ ಎಲ್ಲಾ ಭಾರವು ನನ್ನ ತಲೆಯ ಮೇಲಿದೆ. ನನ್ನನ್ನು ಈ ಅರಮನೆಯಲ್ಲಿ 'ಮೂಲ ಕಂಬ' ಎಂದು ಕರೆಯುತ್ತಾರೆ. ನಿತ್ಯ ಸಾವಿರಾರು ಜನರು ನನ್ನನ್ನು ನೋಡಲು ಬರುತ್ತಿದ್ದಾರೆ. ಹಾಗಾಗಿ ನಾನು ಮತ್ತಷ್ಟು ಜವಾಬ್ದಾರಿಯಿಂದ ನನ್ನ ಕಾರ್ಯವನ್ನು ನಿರ್ವಹಿಸುತ್ತಿದ್ದೇನೆ ಎಂದಾಗ, ಆ ಜ್ಞಾನಿಗೆ ಅರಿವಾಗಿತ್ತು. ಜವಾಬ್ದಾರಿಗಳೇ ಒಬ್ಬ ವ್ಯಕ್ತಿಯ ಬದುಕನ್ನು ತುಂಬಾ ಅರ್ಥಪೂರ್ಣವಾಗಿ ರೂಪಿಸುತ್ತವೆ ಎಂದು. ಈ ಅರಮನೆಯ ಮೂಲ ಕಂಬದ ದೃಷ್ಟಾಂತ ಕೇವಲ ಒಂದು ಸಾಂಕೇತಿಕ ಎನಿಸಿದರೂ ಕೂಡ, ಪ್ರತಿಯೊಬ್ಬರ ಜೀವನದಲ್ಲಿ ಹೀಗೆ ಸಣ್ಣ ಪುಟ್ಟ ಕೆಲಸ ಕಾರ್ಯಗಳಿಂದ ಮಹತ್ತರವಾದ ಜವಾಬ್ದಾರಿಗಳನ್ನು ಹೊರುವ ಮಟ್ಟಿಗೆ ಸಾಮರ್ಥ್ಯವನ್ನು ಬೆಳೆಸಿಕೊಳ್ಳಲು ಸಾಧ್ಯ ಎಂಬುದು ಅರಿವಾಗುತ್ತದೆ.

ನಾನು ಪ್ರಯತ್ನಿಸುತ್ತೇನೆ, ಆ ಕೆಲಸ ಮಾಡುತ್ತೇನೆ, ನನಗೆ ಸಾಧ್ಯವಾಗುತ್ತದೆ ಎನ್ನುವ ಆಶಾದಾಯಕವಾದ ವಿಚಾರಗಳಿಂದ ಜವಾಬ್ದಾರಿಗಳನ್ನು ಹೊತ್ತು ಸಾಗಿದಾಗ ಅಂತಹ ಅಮೂಲ್ಯವಾದ ಜವಾಬ್ದಾರಿಗಳೇ ನಮ್ಮ ಬದುಕನ್ನು ತುಂಬಾ ಅರ್ಥಪೂರ್ಣವಾಗಿ ರೂಪಿಸುವ ಮಾರ್ಗಗಳಾಗುತ್ತವೆ. ಕೇವಲ ಕುಂಟುನೆಪಗಳನ್ನೇ ಹೇಳುತ್ತಾ ಜವಾಬ್ದಾರಿಗಳಿಂದ ಜಾರುತ್ತ ಸಾಗಿದರೆ ನಮ್ಮಲ್ಲಿ ಅದ್ಭುತವಾದ ಜ್ಞಾನ ಸಾಮರ್ಥ್ಯವಿದ್ದರೂ ಅದು ನಿರರ್ಥಕವಾಗುತ್ತದೆ. ಸಿಕ್ಕ ಅವಕಾಶಗಳನ್ನು ಜವಾಬ್ದಾರಿಯುತವಾಗಿ ನಿರ್ವಹಿಸಿದಾಗ ನಮ್ಮಲ್ಲಿ ಮತ್ತಷ್ಟು ಕೆಲಸ ಮಾಡುವ ಚೈತನ್ಯ ಪುಟಿದೇಳುತ್ತದೆ.

**– ಸುಧಾ ಹುಚ್ಚಣ್ಣವರ.**
**ಉಪನ್ಯಾಸಕರು,**
**ಲೇಖಕರು–ಗದಗ.**

# ಕಲಿಸಿದ ಗುರುಗಳನ್ನು ಮರೆಯಬೇಡಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ




ಕಲಿತ ಶಾಲೆಯನ್ನು, ಕಲಿಸಿದ ಗುರುಗಳನ್ನು ಎಂದಿಗೂ ಮರೆಯಬೇಡಿ. ನೀವು ಸಂಸ್ಕಾರವಂತರಾಗಿ ಬಾಳಿದರೆ ಅದೇ ನೀವು ಈ ಸಮಾಜಕ್ಕೆ ನೀಡುವ ದೊಡ್ಡ ಕೊಡುಗೆ ಎಂದು ಶ್ರೀ ಬಸವೇಶ್ವರ ಹಿರಿಯ ಪ್ರಾಥಮಿಕ ಶಾಲೆಯ ಚೇರಮನ್ ಡಾ. ಜಿ.ಕೆ. ಕಾಳೆ ಹೇಳಿದರು.

ಶ್ರೀ ಬಸವೇಶ್ವರ ಹಿರಿಯ ಪ್ರಾಥಮಿಕ ಶಾಲೆಯ 2025–26ನೇ ಸಾಲಿನ ವಿವಿಧ ಸಾಂಘಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆಯನ್ನು ನೆರವೇರಿಸಿ, ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಲವು ಕನಸುಗಳನ್ನಿಟ್ಟುಕೊಂಡು ಲಿಂ. ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳವರು ಈ ಶಾಲೆಯನ್ನು ಪ್ರಾರಂಭಿಸಿದ್ದಾರೆ. ಈ ಶಾಲೆಯ ಮುಖ್ಯ ಶಿಕ್ಷಕಿ ಭಾರತಿ ಶಿರ್ಸಿ ಮತ್ತಿತರರು ತಮ್ಮ ಸಮರ್ಪಣಾ ಮನೋಭಾವನೆಯಿಂದ ದುಡಿದು ಶಾಲೆಗೆ ಒಳ್ಳೆಯ ಹೆಸರನ್ನು ತಂದುಕೊಟ್ಟಿದ್ದಾರೆ. ಇದೆಲ್ಲವನ್ನೂ ಮನಗಂಡು ಈ ಶಾಲೆಯ ಕೀರ್ತಿಯನ್ನು ಹೆಚ್ಚಿಸುವತ್ತ ಗಮನ ನೀಡಬೇಕೆಂದು ಡಾ. ಕಾಳೆ ಹೇಳಿದರು. ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಮಾತನಾಡಿ, ಜೀವನದಲ್ಲಿ ಯಾವುದೇ ಯಶಸ್ಸು ಸುಲಭವಾಗಿ ಒಲಿಯುವಂತಹುದಲ್ಲ. ಅದಕ್ಕೆ ಸತತ ಸಾಧನೆ ಬೇಕು. ಈ ಸಾಧನೆಗೆ ಪರಿಶ್ರಮ, ಶ್ರದ್ಧೆ, ಪ್ರಾಮಾಣಿಕ ಪ್ರಯತ್ನ ಎಲ್ಲವೂ ಬೇಕಾಗುತ್ತದೆ. ತಾಳ್ಮೆಯೂ ಸಹ ಮುಖ್ಯ. ಒಮ್ಮೆಲೇ ಸಿಕ್ಕ ಯಶಸ್ಸು ಎಂದಿಗೂ ಶಾಶ್ವತವಲ್ಲ. ಹಂತಹಂತವಾಗಿ ಪಡೆದ ಯಶಸ್ಸು ನಿಮ್ಮ ಮನಸ್ಸಿಗೆ ನೆಮ್ಮದಿಯನ್ನು ನೀಡುವುದರ ಜೊತೆ–ಗೆ ಶಾಶ್ವತವಾಗಿ ನಿಮ್ಮಲ್ಲಿ ಉಳಿಯುತ್ತದೆ ಎಂದರು. ಸಭೆಯನ್ನುದ್ದೇಶಿಸಿ ಸಂಸ್ಥೆಯ ಆಡಳಿತಾಧಿಕಾರಿ ಎನ್.ಆರ್. ಗೌಡರ ಮಾತನಾಡಿದರು. ವೇದಿಕೆಯ ಮೇಲೆ ಉಚಿತ ಪ್ರಸಾದ ನಿಲಯದ ಚೇರಮನ್ ಮಲ್ಲಿಕಾರ್ಜುನಪ್ಪ ಮೆಣಸಗಿ, ಮುಖ್ಯೋಪಾಧ್ಯಾಯೆ ಬಿ.ಜಿ. ಶಿರ್ಸಿ ಉಪಸ್ಥಿತರಿದ್ದರು. ಶಿಕ್ಷಕಿ ಎಂ.ಎಂ. ಶಿಳ್ಳಿನ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಶಿಕ್ಷಕ ಕೋಳಿವಾಡ ನಿರೂಪಿಸಿದರು. ಒಂಟೇಲಿ ವಂದಿಸಿದರು.

## ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಬೇಡಜಂಗಮ ಸಮಾಜದ ಬಡ ವಿದ್ಯಾರ್ಥಿಗಳಿಗೆ ತೆಗ್ಗಿನಮಠ ಸಂಸ್ಥಾನದ ವತಿಯಿಂದ ಉಚಿತ ವಸತಿ, ಊಟದ ವ್ಯವಸ್ಥೆ ಕಲ್ಪಿಸಲಾಗವುದು ಎಂದು ತೆಗ್ಗಿನಮಠ ಸಂಸ್ಥಾನದ ಪೀಠಾಧ್ಯಕ್ಷರಾದ ಶ್ರೀ ವರಸದ್ಯೋಜಾತ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ಪಟ್ಟಣದ ತೆಗ್ಗಿನಮಠದ ಸಭಾ ಭವನದಲ್ಲಿ ತಾಲೂಕು ಬೇಡಜಂಗಮ ಸಮಾಜದ ವತಿಯಿಂದ ಚಿರಸ್ಥಹಳ್ಳಿಯ ಲಿಂ. ಡಾ. ಕೆ.ಎಂ. ಮುರಿಗಯ್ಯನವರ ಸ್ಮರಣಾರ್ಥವಾಗಿ 2024–25ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ಸಮಾಜದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.

ಪ್ರತಿಯೊಬ್ಬ ಪೋಷಕರು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು. ಹೆಣ್ಣು–ಗಂಡು ಎಂಬ ಲಿಂಗ ಭೇದ ಮಾಡದೆ ಸಮಾನ ಶಿಕ್ಷಣ ಕೊಡಿಸಬೇಕು. ಬೇಡಜಂಗಮ ಸಮಾಜದ ಆಚಾರ–ವಿಚಾರಗಳನ್ನು ಮುಂದುವರಿಸಲು ಮಕ್ಕಳಿಗೆ ಮಾರ್ಗದರ್ಶನ ಮಾಡಬೇಕೆಂದು ಸಮುದಾಯದ ಮುಖಂಡರಿಗೆ ಸಲಹೆ ನೀಡಿದರು.

ತಾಲೂಕು ಬೇಡಜಂಗಮ ಸಮಾಜದ ಅಧ್ಯಕ್ಷ ಕೆ.ಎಂ. ಶಿವಕುಮಾರಸ್ವಾಮಿ, ತೆಗ್ಗಿನಮಠ ಸಂಸ್ಥಾನದ ಕಾರ್ಯದರ್ಶಿ ಡಾ. ಟಿ.ಎಂ. ಚಂದ್ರಶೇಖರಯ್ಯ, ಸಮಾಜದ ಮುಖಂಡರಾದ ಮಲ್ಲಿಕಾರ್ಜುನ ಕಲ್ಮಠ್, ಎಸ್.ಎಂ. ವೀರಭದ್ರಯ್ಯ, ಕೆ.ಎಂ. ಗುರುಸಿದ್ದಯ್ಯ, ಟಿ.ಎಚ್. ಎಂ. ಮಲ್ಲಿಕಾರ್ಜುನಯ್ಯ, ಗ್ರಾ.ಪಂ ಸದಸ್ಯ ಕೆ.ಎಂ. ಚೆನ್ನಮಲ್ಲಿಕಾರ್ಜುನ, ಎಚ್.ಎಂ. ಜಗದೀಶ, ಎ.ಎಸ್. ಎಂ ಗುರುಪ್ರಸಾದ್, ಎಚ್‌ಎಂ. ಬಸವರಾಜಯ್ಯ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಬೆಳೆ ಪದ್ಧತಿ ಆಧಾರಿತ ತರಬೇತಿ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಯಲಿಶಿರೂರ ಗ್ರಾಮದಲ್ಲಿ ಕೃಷಿ ಇಲಾಖೆಯಿಂದ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನದಡಿ ಬೆಳೆ ಪದ್ಧತಿ ಆಧಾರಿತ ತರಬೇತಿ ಕಾರ್ಯಕ್ರಮ ಹಾಗೂ ನ್ಯಾನೋ ಯುರಿಯಾ ಡ್ರೋನ್ ಸಿಂಪರಣೆ ಪ್ರಾತ್ಯಕ್ಷಿಕೆಯನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ರೈತರು ಭಾಗವಹಿಸಿ ಮಾಹಿತಿ ಪಡೆದರು. ಗ್ರಾಮ ಪಂಚಾಯಿತಿ ಅಧ್ಯಕ್ಷ ಮಂಜುನಾಥ ಎಲಿ, ಗ್ರಾಮದ ಹಿರಿಯರಾದ ಫಕೀರಗೌಡ ಪಾಟೀಲ, ಪರಶುರಾಮ ಹೂಗಾರ, ಮಲ್ಲಪ್ಪ ಹೊನ್ನಪ್ಪನವರ, ಶರಣಪ್ಪ ಡೋಣಿ ಉದಯ ಹೊನ್ನಪ್ಪನವರ ಭಾಗವಹಿಸಿದ್ದರು. ಡ್ರೋನ್ ಪ್ರಾತ್ಯಕ್ಷಿಕೆಯನ್ನು ಯಲ್ಲಪ್ಪ ಬಾಬಣ್ಣವರ ಇವರ ಹೊಲದಲ್ಲಿ ಆಯೋಜಿಸಲಾಗಿತ್ತು. ಡ್ರೋನ್ ಬಳಸಿ ನ್ಯಾನೋ ಯುರಿಯಾ ಸಿಂಪರಣೆ ಕಾರ್ಯಕ್ರಮಕ್ಕೆ ಖಈಈಅಔ ಸಂಸ್ಥೆಯ ಸಚಿನ್ ಸಹಯೋಗ ನೀಡಿದರು.

ತೀವ್ರ ರಸಗೊಬ್ಬರ ಬಳಕೆಯಿಂದ ಮಣ್ಣಿನ ಮೇಲಾಗುವ ದುಷ್ಪರಿಣಾಮಗಳನ್ನು ತಪ್ಪಿಸಲು ನ್ಯಾನೋ ರಸಗೊಬ್ಬರಗಳನ್ನು ಬಳಸಲು ಹಾಜರಿದ್ದ ಸಹಾಯಕ ಕೃಷಿ ನಿರ್ದೇಶಕರಾದ ಮಲ್ಲಯ್ಯ ಕೊರವನವರ ವಿನಂತಿಸಿದರು. ಕೃಷಿ ಅಧಿಕಾರಿ ರಾಜೇಶ್ವರಿ ಇಲಾಖೆಯ ವಿವಿಧ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಕೃಷಿ ಅಧಿಕಾರಿ ಇಂಗಳಳ್ಳಿ ಹಾಗೂ ಗುರಿಕಾರ್ ಹಾಜರಿದ್ದರು.

## ರೈತ ಬಾಂಧವರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ವಿವಿಧ ಭಾಗಗಳಲ್ಲಿ ಹಲವಾರು ರೈತರು ಕೆಂಪು ಮಣ್ಣಿನಲ್ಲಿ ಗೊಡಂಬಿ ಬೆಳೆಯನ್ನು ಯಶಸ್ವಿಯಾಗಿ ಬೆಳೆದು ಉತ್ತಮ ಇಳುವರಿಯನ್ನು ಪಡೆಯುತ್ತಿದ್ದು, ಇಲಾಖೆಯಿಂದ ಪ್ರಸಕ್ತ ಸಾಲಿಗೆ ಜಿಲ್ಲೆಯ ರೈತರಿಗೆ ಗೊಡಂಬಿ ಬೆಳೆಯನ್ನು ಬೆಳೆಯಲು ಗೇರು ಹಾಗೂ ಕೋಕೊ ನಿರ್ದೇಶನಾಲಯ, ಕೊಚ್ಚಿನ್ ರವರ ಪ್ರಾಯೋಜಕತ್ವದಲ್ಲಿ ಸಹಾಯಧನ ಸೌಲಭ್ಯವನ್ನು ನೀಡಲಾಗುತ್ತಿದೆ.

ಆಸಕ್ತ ರೈತರಿಗೆ ನಿರ್ದೇಶನಾಲಯದ ವತಿಯಿಂದ ಉಚಿತವಾಗಿ ಗೋಡಂಬಿ ಗಿಡಗಳನ್ನು ವಿತರಸಲಾಗುವುದು. ಪ್ರತಿ ಹೆಕ್ಟೇರ್‌ಗೆ ರೂ. 30000/– ಗಳ ಸಹಾಯಧನ ಲಭ್ಯವಿದ್ದು, ಆಸಕ್ತ ರೈತ ಬಾಂಧವರು ನಿಗದಿತ ನಮೂನೆಯ ಅರ್ಜಿ, ಪಹಣಿ ಪತ್ರಿಕೆ, ಆಧಾರ್ ಕಾರ್ಡ್, ಪಾಸ್‌ಪೋರ್ಟ್ ಅಳತೆಯ ಫೋಟೊ & ಬ್ಯಾಂಕ್ ಪಾಸ್ ಬುಕ್ ದಾಖಲಾತಿಗಳನ್ನು ಸಮೀಪದ ತಾಲೂಕು ತೋಟಗಾರಿಕೆ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಗದಗ/ರೋಣ/ಮುಂಡರಗಿ/ಶಿರಹಟ್ಟಿ ಕಚೇರಿ, ರೈತ ಸಂಪರ್ಕ ಕೇಂದ್ರದ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

### ಜನಜಾಗೃತಿ ಧರ್ಮ ಸಮಾವೇಶದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸಂತಸದ ಬದುಕಿಗೆ ಧರ್ಮವೇ ಆಶಾಕಿರಣ

■ವಿಜಯಸಾಕ್ಷಿ ಸುದ್ದಿ, ದಾವಣಗೆರೆ



ಮಾನವ ಜೀವನದಲ್ಲಿ ಬದಲಾವಣೆ ಮತ್ತು ಬೆಳವಣಿಗೆ ಎರಡೂ ಮುಖ್ಯ. ಇಹಪರದ ಶ್ರೇಯಸ್ಸಿಗೆ ಧರ್ಮವೇ ಮೂಲ. ಸುಖ–ಸಂತಸದ ಬಾಳಿಗೆ ಧರ್ಮವೊಂದೇ ಆಶಾಕಿರಣ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ನಗರದ ಶ್ರೀಮದಭಿನವ ರೇಣುಕ ಮಂದಿರದಲ್ಲಿ ಜರುಗಿದ ಜನಜಾಗೃತಿ ಧರ್ಮ ಸಮಾವೇಶದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸುಖದ ಬದುಕಿಗೆ ಪ್ರಯತ್ನ ಬೇಕು. ಸಾಧನೆ, ಪ್ರಯತ್ನವಿಲ್ಲದೇ ಉನ್ನತಿ ಸಾಧ್ಯವಿಲ್ಲ. ಬದುಕು ವಿಕಾಸಗೊಳ್ಳಲು ಆಧ್ಯಾತ್ಮದ ಅರಿವು ಬೇಕು. ನಡೆ–ನುಡಿ, ಮನಸ್ಸುಗಳ ಸಕ್ರಿಯ ಪರಿಪಾಠವೇ ನಿಜವಾದ ಆಧ್ಯಾತ್ಮ. ಬದುಕು ವ್ಯಕ್ತಿಯಿಂದ ವ್ಯಕ್ತಿಗೆ ಬೇರೆ ಬೇರೆಯಾಗಿರುತ್ತದೆ. ಕೆಲವರ ಬದುಕು ಸುಖಮಯ ಇನ್ನು ಕೆಲವರ ಬದುಕು ದುಃಖಮಯವಾಗಿರುತ್ತವೆ. ಕೆಲವರ ಜೀವನ ಸಂಘರ್ಷದಿಂದ ಕೂಡಿರುತ್ತದೆ. ಕೆಲವರ ಬದುಕು ತುಂಬಾ ಚಿಂತನೆಗಳಿಂದ ಕೂಡಿರುತ್ತದೆ. ಹೃದಯವಂತಿಕೆ ಇಲ್ಲದೇ ಬುದ್ಧಿವಂತಿಕೆ ಎಷ್ಟೇ ಇದ್ದರೂ ಪ್ರಯೋಜನವಿಲ್ಲ. ಬುದ್ಧಿಗಿಂತ ಹೃದಯ ಶ್ರೀಮಂತಿಕೆ ಬಹಳ ಮುಖ್ಯ ಎಂದರು.

ಅ.ಭಾ.ವೀ.ಲಿಂ ಮಹಾಸಭಾ ರಾಷ್ಟ್ರೀಯ ಘಟಕದ ಇನ್ನೋರ್ವ ಉಪಾಧ್ಯಕ್ಷ ಅಣಬೇರು ರಾಜಣ್ಣ ಮಾತನಾಡಿ, ವೀರಶೈವ–ಲಿಂಗಾಯತ ಒಂದೇ ಆಗಿದ್ದು, ಇದನ್ನು ಪ್ರತ್ಯೇಕಿಸುವ ಧ್ವನಿ ಮೂಡಬಾರದು. ವೀರಶೈವ ಲಿಂಗಾಯತ ಎಲ್ಲ ಒಳಪಂಗಡಗಳು ಒಗ್ಗೂಡಿ ಮುಂದುವರೆಯುವ ಅವಶ್ಯಕತೆ ಇದೆ ಎಂದರು.

ಸಮಾರಂಭ ಉದ್ಘಾಟಿಸಿದ ಅ.ಭಾ.ವೀ.ಲಿಂ ಮಹಾಸಭಾ ರಾಷ್ಟ್ರೀಯ ಘಟಕದ ಉಪಾಧ್ಯಕ್ಷ ಡಾ. ಅಥಣಿ ವೀರಣ್ಣನವರು ಮಾತನಾಡಿ, ಹಿರಿಯರ ಮೌಲ್ಯಾಧಾರಿತ ಚಿಂತನಗಳು ಬಾಳಿನ ಆಶಾಕಿರಣ. ಸ್ವಾರ್ಥರಹಿತ ಬದುಕಿಗೆ ಬೆಲೆಯಿದೆ. ನಮ್ಮ ಬದುಕು ಇನ್ನೊಬ್ಬರಿಗೆ ಮಾದರಿಯಾಗಬೇಕಲ್ಲದೇ ಮಾರಕವಾಗಬಾರದು. ಶ್ರೀ ಜಗದ್ಗುರು ರೇಣುಕಾಚಾರ್ಯರ ವಿಚಾರಧಾರೆಗಳು ಬದುಕಿ ಬಾಳುವ ಜೀವಾತ್ಮರಿಗೆ ಸ್ಫೂರ್ತಿಯಾಗಿವೆ ಎಂದರು.

ಡಾ.ಜಿ.ಯಶವಂತ ಅವರಿಗೆ 'ವೈದ್ಯ ಚಿಂತಾಮಣಿ' ಪ್ರಶಸ್ತಿಯಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು. ಮುಖ್ಯ ಅತಿಥಿಗಳಾಗಿ ಅ.ಭಾ.ವೀ.ಲಿಂ ಮಹಾಸಭಾ ರಾಷ್ಟ್ರೀಯ ಘಟಕದ ಉಪಾಧ್ಯಕ್ಷ ಎಸ್.ಎಸ್. ಗಣೇಶ್, ದಾವಣಗೆರೆಯ ಡಿ.ಡಿ. ಬಸವರಾಜಪ್ಪ, ಹೆಚ್.ಬಿ. ಮಂಜಪ್ಪ, ಡಾ. ರಾಜಶೇಖರ್ ಅಣ್ಣಿಗೇರಿ, ಗೌತಮ್ ಜೈನ್, ಸುನೀತಾ ಆರ್, ನಾಗಲಕ್ಷ್ಮಿ, ಶೃತಿ, ಎನ್.ಎಚ್. ಶಿವಗಂಗಮ್ಮ, ಖಂಡೋಜಿರಾವ್ ಜಾಧವ್, ಎಂ. ಲಕ್ಷ್ಮಿ, ನಾಗವೇಣಿ, ಶಿವಮ್ಮ ಬಸವರಾಜಪ್ಪ ಆಗಮಿಸಿ ನುಡಿ ನಮನ ಸಲ್ಲಿಸಿದರು. ಸಮಾರಂಭದಲ್ಲಿ ಶ್ರೀ ಜಗದ್ಗುರು ರೇಣುಕ ಸಾಂಸ್ಕೃತಿಕ ಸಂಘದ ಅಧ್ಯಕ್ಷ ದೇವರಮನೆ ಶಿವರಾಜ್, ಶ್ರೀಮದ್ವೀರಶೈವ ಸದ್ಬೋಧನಾ ಸಂಸ್ಥೆ ಜಿಲ್ಲಾ ಘಟಕದ ಅಧ್ಯಕ್ಷ ದೇವರಮನೆ ಶಿವಕುಮಾರ್ ಉಪಸ್ಥಿತರಿದ್ದರು. ನೇತೃತ್ವ ವಹಿಸಿದ ಎಡೆಯೂರು ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿದರು. ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ಧರ್ಮ ಮತ್ತು ಧರ್ಮಾಚರಣೆ ಕುರಿತು ಮಾತನಾಡಿದರು. ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಉಪಸ್ಥಿತರಿದ್ದರು. ಜಯದೇವ ಎಸ್. ದೇವರಮನಿ ಸ್ವಾಗತಿಸಿದರು. ಹರಿಹರದ ಸೌಭಾಗ್ಯ ಹಿರೇಮಠ ನಿರೂಪಿಸಿದರು.

## ಬೆಳೆ ಪದ್ಧತಿ ಆಧಾರಿತ ತರಬೇತಿ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಯಲಿಶಿರೂರ ಗ್ರಾಮದಲ್ಲಿ ಕೃಷಿ ಇಲಾಖೆಯಿಂದ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನದಡಿ ಬೆಳೆ ಪದ್ಧತಿ ಆಧಾರಿತ ತರಬೇತಿ ಕಾರ್ಯಕ್ರಮ ಹಾಗೂ ನ್ಯಾನೋ ಯುರಿಯಾ ಡ್ರೋನ್ ಸಿಂಪರಣೆ ಪ್ರಾತ್ಯಕ್ಷಿಕೆಯನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ರೈತರು ಭಾಗವಹಿಸಿ ಮಾಹಿತಿ ಪಡೆದರು. ಗ್ರಾಮ ಪಂಚಾಯಿತಿ ಅಧ್ಯಕ್ಷ ಮಂಜುನಾಥ ಎಲಿ, ಗ್ರಾಮದ ಹಿರಿಯರಾದ ಫಕೀರಗೌಡ ಪಾಟೀಲ, ಪರಶುರಾಮ ಹೂಗಾರ, ಮಲ್ಲಪ್ಪ ಹೊನ್ನಪ್ಪನವರ, ಶರಣಪ್ಪ ಡೋಣಿ ಉದಯ ಹೊನ್ನಪ್ಪನವರ ಭಾಗವಹಿಸಿದ್ದರು. ಡ್ರೋನ್ ಪ್ರಾತ್ಯಕ್ಷಿಕೆಯನ್ನು ಯಲ್ಲಪ್ಪ ಬಾಬಣ್ಣವರ ಇವರ ಹೊಲದಲ್ಲಿ ಆಯೋಜಿಸಲಾಗಿತ್ತು. ಡ್ರೋನ್ ಬಳಸಿ ನ್ಯಾನೋ ಯುರಿಯಾ ಸಿಂಪರಣೆ ಕಾರ್ಯಕ್ರಮಕ್ಕೆ ಖಈಈಅಔ ಸಂಸ್ಥೆಯ ಸಚಿನ್ ಸಹಯೋಗ ನೀಡಿದರು.

ತೀವ್ರ ರಸಗೊಬ್ಬರ ಬಳಕೆಯಿಂದ ಮಣ್ಣಿನ ಮೇಲಾಗುವ ದುಷ್ಪರಿಣಾಮಗಳನ್ನು ತಪ್ಪಿಸಲು ನ್ಯಾನೋ ರಸಗೊಬ್ಬರಗಳನ್ನು ಬಳಸಲು ಹಾಜರಿದ್ದ ಸಹಾಯಕ ಕೃಷಿ ನಿರ್ದೇಶಕರಾದ ಮಲ್ಲಯ್ಯ ಕೊರವನವರ ವಿನಂತಿಸಿದರು. ಕೃಷಿ ಅಧಿಕಾರಿ ರಾಜೇಶ್ವರಿ ಇಲಾಖೆಯ ವಿವಿಧ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಕೃಷಿ ಅಧಿಕಾರಿ ಇಂಗಳಳ್ಳಿ ಹಾಗೂ ಗುರಿಕಾರ್ ಹಾಜರಿದ್ದರು.

## 2 ಕಾರುಗಳ ನಡುವೆ ಮುಖಾಮುಖಿ ಡಿಕ್ಕಿ: ಇಬ್ಬರ ಸಾವು

■ವಿಜಯಸಾಕ್ಷಿ ಸುದ್ದಿ, ಹಾಸನ

ಎರಡು ಕಾರುಗಳ ನಡುವೆ ಮುಖಾಮುಖಿ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದು, ನಾಲ್ವರ ಸ್ಥಿತಿ ಗಂಭೀರವಾಗಿರುವ ಘಟನೆ ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕಿನ ಶೆಟ್ಟಿಹಳ್ಳಿ ಬಳಿಯ ಮೇಲ್ ಸೇತುವೆ ಬಳಿ ಜರುಗಿದೆ.

### ತಾಲೂಕಾ ಪತ್ರಕರ್ತರ ಸಂಘದಿಂದ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ, ರಕ್ತದಾನ ಶಿಬಿರ ಉದ್ಘಾಟಿಸಿದ ಶಾಸಕ ಡಾ. ಚಂದ್ರು ಲಮಾಣಿ

# ಪತ್ರಿಕಾ ಕ್ಷೇತ್ರಕ್ಕೆ ಶಕ್ತಿ ತುಂಬುವ ಕೆಲಸವಾಗಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಗತ್ತಿನ ಆಗು-ಹೋಗುಗಳ ಮಾಹಿತಿ, ಜ್ಞಾನ ನೀಡುವ ಜೊತೆಗೆ ಧಾರ್ಮಿಕ, ಶೈಕ್ಷಣಿಕ, ರಾಜಕೀಯ, ಕೃಷಿ ಹೀಗೆ ಸಮಾಜದ ಎಲ್ಲ ಸ್ತರದ ಪ್ರತಿಬಿಂಬವಾಗಿ ಜವಾಬ್ದಾರಿಯುತ ಕಾರ್ಯನಿರ್ವಹಿಸುವ ಪತ್ರಿಕಾ ಕ್ಷೇತ್ರಕ್ಕೆ ಇನ್ನಷ್ಟು ಶಕ್ತಿ ತುಂಬುವ ಕೆಲಸ ಸಮಾಜದಿಂದ ಆಗಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶನಿವಾರ ತಾಲೂಕಾ ಪತ್ರಕರ್ತರ ಸಂಘದಿಂದ ಪತ್ರಿಕಾ ದಿನಾಚರಣೆ ಅಂಗವಾಗಿ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ರಕ್ತದಾನ ಶಿಬಿರ ಮತ್ತು ವೈದ್ಯರಿಗೆ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಸಮಾಜ ಸುಧಾರಣೆಯ ಅಸ್ತ್ರಗಳಾದ ಪತ್ರಿಕೆಗಳಿಗೆ ಅದರದ್ದೇ ಆದ ಜವಾಬ್ದಾರಿಗಳಿವೆ. ಇಂದು ಎಲ್ಲ ಬದಲಾವಣೆ, ಸುಧಾರಣೆಗಳು ಮಾಧ್ಯಮದವರಿಂದಲೇ ಆಗಬೇಕು ಎಂಬ ಸಾಮಾಜಿಕ ಮನೋಧೋರಣೆ ಬದಲಾಗಬೇಕು. ಬದಲಾವಣೆಗೆ ತಕ್ಕಂತೆ ನಮ್ಮ ವೃತ್ತಿ ಕೌಶಲ್ಯ ಬದಲಾಯಿಸಿಕೊಳ್ಳಬೇಕಿದೆ. ಪತ್ರಕರ್ತರು ಪಕ್ಷ, ಜಾತಿ, ಧರ್ಮ, ಸ್ನೇಹ, ಸಂಬಂಧ, ರಾಜಕೀಯದ ಮುಲಾಜಿಗೆ ಒಳಗಾಗದೇ ಕರ್ತವ್ಯ ನಿಷ್ಠೆ ತೋರಬೇಕು. ಸಮಾಜದಲ್ಲಿ ಅನ್ಯಾಯಕ್ಕೊಳಗಾದವರ, ಅಸಹಾಯಕರ, ನೊಂದವರ ಧ್ವನಿಯಾಗಿ ನಿಲ್ಲಬೇಕು. ಇಂದು ಪತ್ರಿಕಾರಂಗ ಸಾಕಷ್ಟು ಸವಾಲುಗಳನ್ನು ಎದುರಿಸುತ್ತಿದ್ದರೂ ಅತ್ಯಂತ ಕಡಿಮೆ ಬೆಲೆಗೆ ಓದುಗರ ಮನೆ ಬಾಗಿಲಿಗೆ ಪತ್ರಿಕೆ ತಲುಪುವ ವ್ಯವಸ್ಥೆ ರಾಜ್ಯದಲ್ಲಿದೆ. ಜ್ಞಾನ ಸಂಪಾದನೆಯ ಅಸ್ತ್ರಗಳಾಗಿರುವ ಪತ್ರಿಕೆಗಳನ್ನು ಕೊಂಡು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದರು.



ತಾಲೂಕಾ ಪತ್ರಕರ್ತರ ಸಂಘದಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ತಾಲೂಕಾ ವೈದ್ಯರ ಸಂಘದ ಅಧ್ಯಕ್ಷರು, ಹಿರಿಯ ವೈದ್ಯರಾದ ಡಾ. ಎಸ್.ಸಿ ಮಲ್ಲಾಡದ ಮತ್ತು ಐಎಂಎ ತಾಲೂಕಾ ಅಧ್ಯಕ್ಷ ಡಾ. ಪಿ.ಡಿ. ತೆ-ಣೀಟದ ಮಾತನಾಡಿ, ಮೊಬೈಲ್, ಕಂಪ್ಯೂಟರ್, ದೃಶ್ಯ ಮಾಧ್ಯಮದ ಪ್ರಭಾವದ ನಡುವೆಯೂ ಪತ್ರಿಕೆಗಳು ಜನರ ನಂಬಿಕೆ, ವಿಶ್ವಾಸಕ್ಕೆ ಪಾತ್ರವಾಗಿವೆ. ಆರೋಗ್ಯ, ಶಿಕ್ಷಣ, ರಾಜಕೀಯ ವಿವಿಧ ಕ್ಷೇತ್ರಗಳು ಮೌಲ್ಯ ಕಳೆದುಕೊಂಡು ಜಿಡ್ಡುಗಟ್ಟಿದಾಗ ಎಚ್ಚರಿಸುವ ಕಾರ್ಯವನ್ನು ಪತ್ರಿಕಾ ರಂಗ ಮಾಡುತ್ತದೆ. ಸಮಾಜ ಪತ್ರಿಕಾ ಕ್ಷೇತ್ರವನ್ನು ಗೌರವದಿಂದ ಕಾಣಬೇಕು. ಪಾಲಕರು ಮಕ್ಕಳಲ್ಲಿ ಪತ್ರಿಕೆ ಓದುವ ಹವ್ಯಾಸ ಬೆಳೆಸಬೇಕು. ಆಡಂಬರ, ಆರ್ಥಿಕ ವೆಚ್ಚವಿಲ್ಲದೇ ಜೀವ ಉಳಿಸುವ ರಕ್ತದಾನ ಶಿಬಿರ ಮಾಡಿರುವುದು ಪ್ರಶಂಸನೀಯ ಎಂದರು.

ಈ ವೇಳೆ ಡಾ. ಅರುಂಧತಿ ಕುಲಕರ್ಣಿ, ಡಾ. ಸುಭಾಸ ದಾಯಗೊಂಡ, ಡಾ. ಶ್ರೀಕಾಂತ ಕಾಟೇವಾಲೆ, ಡಾ. ಮಲ್ಲಿಕಾರ್ಜುನ ಪಟ್ಟಣಶೆಟ್ಟಿ, ಡಾ. ಉಮೇಶ ಹಾಗೂ 50 ಬಾರಿ ರಕ್ತದಾನ ಮಾಡಿದ ಆರೋಗ್ಯ ಇಲಾಖೆ ಸಿಬ್ಬಂದಿ ಶಿವಯ್ಯ ಕುಲಕರ್ಣಿ ಅವರನ್ನು ಸನ್ಮಾನಿಸಲಾಯಿತು. ವೇದಿಕೆಯಲ್ಲಿ ತಾಲೂಕಾ ನೌಕರ ಸಂಘದ ಅಧ್ಯಕ್ಷ ಗುರುರಾಜ ಹವಳದ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಡಾ. ಎಸ್.ಬಿ. ಪಾಟೀಲ, ಹಿರಿಯ ಮುಖಂಡ ಚಂಬಣ್ಣ ಬಾಳಿಕಾಯಿ, ಸ್ಥಾಯಿ ಸಮಿತಿ ಅಧ್ಯಕ್ಷ ವಿಜಯ ಕರಡಿ, ವೀರಣ್ಣ ಪವಾಡದ, ಹಿರಿಯ ಪತ್ರಕರ್ತ ರಮೇಶ ನಾಡಗೇರ ಪ್ರಸ್ತಾವಿಕ ಮಾತನಾಡಿದರು. ತಾಲೂಕಾ ಪಂಚಮಸಾಲಿ ಸಮಾಜದ ಅಧ್ಯಕ್ಷ ಮಂಜುನಾಥ ಮಾಗಡಿ ಪಾಲ್ಗೊಂಡು ಪತ್ರಕರ್ತರನ್ನು ಸನ್ಮಾನಿಸಿದರು.

ಪತ್ರಕರ್ತರಾದ ನಾಗರಾಜ ಹಣಗಿ, ದಿಗಂಬರ ಪೂಜಾರ, ಅಶೋಕ ಸೊರಟೂರ, ಸೋಮಣ್ಣ ಯತ್ತಿನಹಳ್ಳಿ, ಕರಿಯಪ್ಪ ಶಿರಹಟ್ಟಿ, ಶಿವಲಿಂಗಯ್ಯ ಹೊತಗಿಮಠ, ಪರಮೇಶ ಲಮಾಣಿ, ಮಾಳಿಂಗರಾಯ ಪೂಜಾರ, ಸುರೇಶ ಲಮಾಣಿ, ಮಂಜು ಲಮಾಣಿ, ಇನ್ನರ್‌ವ್ಹಿಲ್ ಕ್ಲಬ್ ಅಧ್ಯಕ್ಷರು, ಸದಸ್ಯರು ಪಾಲ್ಗೊಂಡಿದ್ದರು. ರಕ್ತದಾನ ಶಿಬಿರದಲ್ಲಿ 40 ಜನ ರಕ್ತದಾನಿಗಳು ರಕ್ತದಾನ ಮಾಡಿದರು.

ಅಧ್ಯಕ್ಷತೆ ವಹಿಸಿದ್ದ ತಾಲೂಕಾ ಪತ್ರಕರ್ತರ ಸಂಘದ ಅಧ್ಯಕ್ಷ ಮಲ್ಲು ಕಳಸಾಪುರ ಮಾತನಾಡಿ, ಇಂದು ವೈದ್ಯಕೀಯ ಕ್ಷೇತ್ರದ ಕ್ಷಿಪ್ರ ಪ್ರಗತಿಯಿಂದ ಹೃದಯ ಸೇರಿ ಮನುಷ್ಯನಿಗೆ ಕೃತಕವಾದ ಅಂಗಗಳನ್ನು ಅಳವಡಿಸಬಹುದು. ಆದರೆ, ರಕ್ತವನ್ನು ಮಾತ್ರ ಕೃತಕವಾಗಿ ಸೃಷ್ಟಿಸಲಾಗದು. ಇದೀಗ ರಕ್ತದ ಅವಶ್ಯಕತೆ ಸಾಕಷ್ಟಿದ್ದು, ಸ್ವಯಂ ರಕ್ತದಾನ ಮಾಡುವ ಅವಶ್ಯಕತೆಯಿದೆ. ಈ ನಿಟ್ಟಿನಲ್ಲಿ ಪತ್ರಿಕಾ ದಿನಾಚರಣೆ ಅಂಗವಾಗಿ ತಾಲೂಕಿನ ಶಿಕ್ಷಕರು, ಸಂಘಟನೆಯವರು, ನೌಕರ ವರ್ಗದ ಸಹಕಾರದೊಂದಿಗೆ ಅರ್ಥಪೂರ್ಣ, ಸಮಾಜೋಪಯೋಗಿ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದರು.

## ಇನ್ನರ್ ವೀಲ್ ಕ್ಲಬ್‌ನ ಸಾಮಾಜಿಕ ಕಾರ್ಯ ಶ್ಲಾಘನೀಯ



■ವಿಜಯಸಾಕ್ಷಿ ಸುದ್ದಿ, ಗದಗ

ಚಳಿಗಾಲದ ಚಳಿಯಿಂದ ನಮ್ಮನ್ನು ಬೆಚ್ಚಗೆ ಇಟ್ಟುಕೊಳ್ಳುವುದು ಅವಶ್ಯ. ಹೊದಿಕೆಗಳು ನಮಗೆ ಬೆಚ್ಚಗಿನ ಅನುಭವ ಮತ್ತು ಸುರಕ್ಷತೆಯನ್ನು ಒದಗಿಸುತ್ತವೆ. ದೇಹದ ತಾಪಮಾನವನ್ನು ಕಾಪಾಡಿ ಯಾವುದೇ ರೋಗರುಜಿನಗಳು ಬರದಂತೆ ತಡೆಯುತ್ತವೆ. ಈ ಹಿನ್ನೆಲೆಯಲ್ಲಿ ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ ಸರಕಾರಿ ವಿಶೇಷ ಚೇತನ ಮಕ್ಕಳಿಗೆ ಹೊದಿಕೆಗಳನ್ನು ನೀಡಿ ತಮ್ಮ ಸಾಮಾಜಿಕ ಜವಾಬ್ದಾರಿಯನ್ನು ನಿರ್ವಹಿಸಿದ್ದಾರೆ. ಇನ್ನರ್ ವ್ಹೀಲ್ ಸಂಸ್ಥೆ ಗದಗ-ಬೆಟಗೇರಿಯ ಸಾಮಾಜಿಕ ಕಾರ್ಯ ಶ್ಲಾಘನೀಯ ಎಂದು ಕ್ಷೇತ್ರ ಸಮನ್ವಯ ಅಧಿಕಾರಿ ಎಸ್.ಪಿ. ಪ್ರಭಯ್ಯನಮಠ ಹೇಳಿದರು.

ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ ಸರಕಾರಿ ವಿಶೇಷ ಚೇತನ ಮಕ್ಕಳಿಗೆ ಹೊದಿಕೆಗಳನ್ನು ಕೊಡುಗೆಯಾಗಿ ವಿತರಿಸಿ ಅವರು ಮಾತನಾಡಿದರು.

ಸಂಸ್ಥೆಯ ಅಧ್ಯಕ್ಷರಾದ ಅಶ್ವಿನಿ ಜಗತಾಪ ಮಾತನಾಡಿ, ಸಮಾಜದಲ್ಲಿ ಪ್ರತಿಯೊಬ್ಬ ವ್ಯಕ್ತಿಗೂ ಸಿಗುವ ಸನ್ಮಾನ ಮತ್ತು ಅನುಕೂಲತೆಗಳು ವಿಶೇಷ ಚೇತನ ಮಕ್ಕಳಿಗೂ ಸಿಗಬೇಕು. ಈ ನಿಟ್ಟಿನಲ್ಲಿ ನಮ್ಮ ಸಂಸ್ಥೆಯಿಂದ ಸಾಧ್ಯವಾದಷ್ಟು ಅವಶ್ಯಕತೆಗಳನ್ನು ಪೂರೈಸುತ್ತೇವೆ ಎಂದರು.

ಸಂಸ್ಥೆಯ ಕಾರ್ಯದರ್ಶಿ ಶಿವಲೀಲಾ ಅಕ್ಕಿ ಕಾರ್ಯಕ್ರಮ ನಿರೂಪಿಸಿದರು. ಈ ಸಂದರ್ಭದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಶ್ಯಾಮ ಲಾಂಡೆ, ಕೋಶಾಧ್ಯಕ್ಷರಾದ ಪುಷ್ಪ ಭಂಡಾರಿ, ಸಂಪಾದಕರಾದ ವೀಣಾ ಕಾವೇರಿ, ಸಿಪಿಸಿಸಿ ಮೀನಾಕ್ಷಿ ಕೊರವಣ್ಣನವರ್, ಸದಸ್ಯರಾದ ಸುಮಾ ಪಾಟೀಲ ಮತ್ತು ರೇಖಾ ರೊಟ್ಟಿ ಉಪಸ್ಥಿತರಿದ್ದರು.

## ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಜುಲೈ 21 ಮತ್ತು 22ರಂದು ಧಾರವಾಡ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.

ಜುಲೈ 21ರಂದು ಬೆಳಿಗ್ಗೆ 11 ಗಂಟೆಗೆ ಧಾರವಾಡ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ 2025-26 ಸಾಲಿನ ಮೊದಲನೇ ತ್ರೈಮಾಸಿಕ ಕರ್ನಾಟಕ ಅಭಿವೃದ್ಧಿ ಯೋಜನೆ (ಕೆ.ಡಿ.ಪಿ) ಸಭೆಯನ್ನು ಜರುಗಿಸುವರು. ಜುಲೈ 22ರಂದು ಬೆಳಿಗ್ಗೆ 11 ಗಂಟೆಗೆ ಅಣ್ಣಿಗೇರಿ ತಾಲೂಕಿನ ಆದಿಕವಿ ಪಂಪ ಸ್ಮಾರಕ ಭವನದಲ್ಲಿ ಜಿಲ್ಲಾ ಮಟ್ಟದ ಜನ ಸಂಪರ್ಕ ಸಭೆಯನ್ನು ಜರುಗಿಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ವಾಮೀಜಿ ಆಸ್ಪತ್ರೆ ಸೇರಿರೋದು ಪ್ರಚಾರದ ಒಂದು ಭಾಗ: ವಿಜಯಾನಂದ ಕಾಶಪ್ಪನವರ್ ಆರೋಪ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಜಯಮೃತ್ಯುಂಜಯ ಸ್ವಾಮೀಜಿ ಆಸ್ಪತ್ರೆ ಸೇರಿರೋದು ಪ್ರಚಾರದ ಒಂದು ಭಾಗ ಎಂದು ಪಂಚಮಸಾಲಿ ಟ್ರಸ್ಟ್ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ್ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸ್ವಾಮೀಜಿಗಳು ನನ್ನ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಿದ್ದಾರೆ. ಸ್ವಾಮೀಜಿಗಳು ಮಹಾನ್ ನಾಯಕರ ಪರವಾಗಿ ಬಿಜೆಪಿ ವೇದಿಕೆಯ ಮೇಲೆಯೇ ಕುಳಿತಿದ್ದಾರೆ. ಬಿಜೆಪಿಗೆ ಸ್ವಾಮೀಜಿಗಳು ಅಧಿಕೃತವಾಗಿ ಸೇರಿದ್ದಾರೆ. 2ಡಿ ಬೇಕಾ ಅಥವಾ 2ಎ ಬೇಕಾ ಎಂಬ ಸ್ಪಷ್ಟನೆ ನೀಡಬೇಕೆಂದು ಅವರೇ ಕೋರಿದ್ದಾರೆ ಎಂದು ವಿಜಯಾನಂದ ಆರೋಪ ಮಾಡಿದ್ದಾರೆ.

## ಸಣ್ಣ ವ್ಯಾಪಾರಿಗಳಿಗೆ 'ಟ್ಯಾಕ್ಸ್' ಶಾಕ್: ರಾಜ್ಯ ಸರ್ಕಾರದ ವಿರುದ್ಧ ಬಸವರಾಜ್ ಬೊಮ್ಮಾಯಿ ಆಕ್ರೋಶ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಣ್ಣ ವ್ಯಾಪಾರಿಗಳಿಗೆ ವಾಣಿಜ್ಯ ತೆರಿಗೆ ಇಲಾಖೆ ಜಿಎಸ್‌ಟಿ ಶಾಕ್ ಕೊಟ್ಟಿರುವ ವಿಚಾರವಾಗಿ ಸಂಸದ ಬಸವರಾಜ್ ಬೊಮ್ಮಾಯಿ ಆಕ್ರೋಶ ಹೊರ ಹಾಕಿದ್ದಾರೆ.

ಈ ಬಗ್ಗೆ X ಮಾಡಿರುವ ಅವರು, ಕರ್ನಾಟಕದಲ್ಲಿ ಸಣ್ಣ ಮತ್ತು ಅತಿ ಸಣ್ಣ ವ್ಯಾಪಾರಸ್ಥರಿಗೆ ರಾಜ್ಯ ಸರ್ಕಾರದ ವಾಣಿಜ್ಯ ತೆ-ರಿಗೆ ಇಲಾಖೆ ಜಿಎಸ್‌ಟಿ ಶಾಕ್ ಕೊಟ್ಟಿರುವಂಥದ್ದು ಅತ್ಯಂತ ಖಂಡನೀಯ. ಜಿಎಸ್‌ಟಿ ಕಾನೂನು ಅಡಿಯಲ್ಲಿ ವ್ಯಾಪಾರ ವಹಿವಾಟು ಮಾಡಲು ಕೆಲವು ರಿಯಾಯಿತಿ ಇದೆ. ಸಿಎಂ ಸಿದ್ದರಾಮಯ್ಯ ಈ ವಿಚಾರದಲ್ಲಿ ಮಧ್ಯಪ್ರವೇಶ ಮಾಡಿ ಕೂಡಲೇ ಸಣ್ಣ ವ್ಯಾಪಾರಸ್ಥರಿಗೆ ಪರಿಹಾರ ಒದಗಿಸಬೇಕೆಂದು ಆಗ್ರಹಿಸಿದ್ದಾರೆ.



ಸಣ್ಣ ಮತ್ತು ಅತಿ ಸಣ್ಣ ವ್ಯಾಪಾರಿಗಳ ವಿಚಾರದಲ್ಲಿ ರಾಜ್ಯ ವಾಣಿಜ್ಯ ತೆರಿಗೆ ಇಲಾಖೆ, ದುಡುಕಿ ಹಲವಾರು ವರ್ಷದ ತೆರಿಗೆ ಅದರ ಮೇಲೆ ಬಡ್ಡಿ ಮತ್ತು ಇತರ ಚಾರ್ಜ್ ಹಾಕಿದೆ. ಈ ಮೂಲಕ ಸಣ್ಣ ಬೀದಿಬದಿ ವ್ಯಾಪಾರಸ್ಥರ ಮೇಲೆ ದೊಡ್ಡ ಹೊರೆ ಹೊರೆಸಿ ಅವರು ವ್ಯಾಪಾರ ಮುಚ್ಚುವ ಪರಿಸ್ಥಿತಿಗೆ ತಂದಿರುವುದು ಯಾರೂ ಕೂಡ ಒಪ್ಪಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ.

ಸಂಬಂಧಪಟ್ಟ ಸಣ್ಣ ವ್ಯಾಪಾರಿಗಳ ಪ್ರತಿನಿಧಿಗಳನ್ನು ಕರೆದು ಚರ್ಚೆ ಮಾಡಿ, ಅವರಿಗೆ ಎಲ್ಲ ರೀತಿಯ ರಿಯಾಯಿತಿಗಳನ್ನು ಕೊಟ್ಟು ಕರ ಸಮಾಧಾನ ಯೋಜನೆ ಅಡಿಯಲ್ಲಿ ಯಾವ ರೀತಿ ತೆರಿಗೆದಾರರಿಗೆ ಸಹಾಯ ಮಾಡುತ್ತೇವೊ, ಅದೇ ರೀತಿ ಅವರಿಗೂ ಸಹಾಯ ಮಾಡಬೇಕು ಎಂದು ಆಗ್ರಹಿಸಿದ್ದಾರೆ.


### ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದಿಂದ ದತ್ತಿ ಉಪನ್ಯಾಸ

# ಉತ್ತಮ ಆಹಾರ ಸೇವನೆಗೆ ಒತ್ತು ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಪುರುಷರಿಗೆ 40 ವರ್ಷ ಮತ್ತು ಮಹಿಳೆಯರಿಗೆ ಋತುಚಕ್ರ ನಿಂತ ನಂತರ ಮೊಣಕಾಲು ನೋವು ಬರುವ ಸಾಧ್ಯತೆಗಳು ಹೆಚ್ಚಾಗುತ್ತವೆ. ಇನ್ನೂ ಅನೇಕ ಜನರು ಸುದೀರ್ಘವಾಗಿ ನೋವು ನಿವಾರಕ ಮಾತ್ರೆಗಳನ್ನು ಸೇವಿಸುವುದರಿಂದ ಕೂಡಾ ತೊಂದರೆಗಳಿಗೆ ಒಳಗಾಗುತ್ತಾರೆ. ಶೇ.20 ಜನರಿಗೆ ನೈಸರ್ಗಿಕವಾಗಿ ಮತ್ತು ವಯಸ್ಸಿನಿಂದ ಕೂಡಾ ಮೊಣಕಾಲು ನೋವು ಬರುವ ಸಾಧ್ಯತೆಗಳಿವೆ. ದೇಹದಲ್ಲಿ ಕ್ಯಾಲ್ಸಿಯಂ ಕೊರತೆಯಿಂದಲೂ ತೊಂದರೆ-ಯಾಗುತ್ತದೆ ಎಂದು ಅರ್ಥೋಪಿಡಿಕ್ ಡಾ. ಶರದ ಶಿರೋಳ ಹೇಳಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ದಿ. ಶ್ರೀಮತಿ ಇಂದುಮತಿ ಲಕ್ಷ್ಮಣರಾವ್ ಪೊತ್ನೀಸ ಇವರ ಸ್ಮಾರಕ ದತ್ತಿ ಉಪನ್ಯಾಸದಲ್ಲಿ ಮೊಣಕಾಲು ಸುರಕ್ಷತೆ ಕುರಿತು ವಿಚಾರ ಸಂಕಿರಣವನ್ನು ಉದ್ದೇಶಿಸಿ ಅವರು ಉಪನ್ಯಾಸ ನೀಡುತ್ತಿದ್ದರು.



ಸಕ್ಕರೆ ಕಾಯಿಲೆ, ಬಿ.ಪಿ ಇರುವ ಸಂದರ್ಭದಲ್ಲಿ ಹೆಚ್ಚಿನ ಮಾತ್ರೆ ತೆಗೆದುಕೊಳ್ಳುವುದರಿಂದ ಕೂಡಾ ತೊಂದರೆಯಾಗುವ ಸಾಧ್ಯತೆಯಿದೆ. ಆದ್ದರಿಂದ ಮೊಣಕಾಲು ನೋವು ಬಂದಾಗ ವೈದ್ಯರಿಂದ ಪರಿಹಾರ ಕಂಡುಕೊಳ್ಳಬೇಕು. ವಯಸ್ಸಾದವರು ಮೊಣಕಾಲು ನೋವಿನಿಂದ ಅನೇಕ ತೊಂದರೆಗಳನ್ನು ಎದುರಿಸುತ್ತಾರೆ. ಈ ನಿಟ್ಟಿನಲ್ಲಿ ಅವರನ್ನು ಹೆಚ್ಚಿನ ಜಾಗೃತಿಯಿಂದ ನೋಡಿಕೊಳ್ಳಬೇಕು ಎಂದು ತಿಳಿಸಿದರು. ವೇದಿಕೆಯಲ್ಲಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ಉಪಸ್ಥಿತರಿದ್ದರು.

ದಿ. ಇಂದುಮತಿ ಲಕ್ಷ್ಮಣರಾವ್ ಪೊತ್ನೀಸ ಇವರ ಪರಿಚಯವನ್ನು ಜಯಶ್ರೀ ತಾತನಗೌಡ ಪಾಟೀಲ ಮಾಡಿದರು. ಅತಿಥಿ ಉಪನ್ಯಾಸಕರ ಪರಿಚಯವನ್ನು ಸುಷ್ಮಾ ಎಸ್. ಜಾಲಿ ಮಾಡಿದರು. ವಿಚಾರ ಸಂಕಿರಣದಲ್ಲಿ ರಾಜ್ಯ ಸರಕಾರ ಒಡೆತನದ ಕರ್ನಾಟಕ ಸಹಕಾರ ಕುಕ್ಕುಟ ಮಹಾಮಂಡಳದ ರಾಜ್ಯ ಉಪಾಧ್ಯಕ್ಷರು ಹಾಗೂ ಗದಗ-ಬೆಟಗೇರಿ ನಗರ ಸಭೆಯ ಮಾಜಿ ಅಧ್ಯಕ್ಷರಾದ ನಾಗರತ್ನಾ ಶಿವಪ್ಪ ಮುಳಗುಂದರ ಪರಿಚಯವನ್ನು ಮಹಿಳಾ ಘಟಕದ ಉಪಾಧ್ಯಕ್ಷರಾದ ಸುಜಾತಾ ಎಸ್.ಗುಡಿಮನಿ ಮಾಡಿದರು. ಲಲಿತಾ ಕುರಡಗಿ ಪ್ರಾರ್ಥಿಸಿದರು. ಮಹಿಳಾ ಘಟಕದ ಅಧ್ಯಕ್ಷರಾದ ನಂದಾ ಚಂದ್ರು ಬಾಳಿಹಳ್ಳಿಮಠ ಸ್ವಾಗತಿಸಿದರು. ದತ್ತಿ ಉಪನ್ಯಾಸ ಉಪ ಸಮಿತಿ ಚೇರಮನ್ ಚಂದ್ರು ಬಾಳಿಹಳ್ಳಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹಿಳಾ ಘಟಕದ ಸದಸ್ಯರಾದ ನಿರ್ಮಲಾ ಧಶರಥರಾಜ ಕೊಳ್ಳಿ ಕಾರ್ಯಕ್ರಮ ನಿರೂಪಿಸಿದರು. ಸಂಸ್ಥೆಯ ಕೋಶಾಧ್ಯಕ್ಷರಾದ ಪೂರ್ಣಿಮಾ ಕೆ.ಆಟದ ವಂದಿಸಿದರು.

ಮಹಿಳಾ ಘಟಕದ ಉಪಾಧ್ಯಕ್ಷರಾದ ಸುಷ್ಮಾ ಎಸ್. ಜಾಲಿ, ಸುಜಾತಾ ಎಸ್.ಗುಡಿಮನಿ, ಸಹ ಗೌರವ ಕಾರ್ಯದರ್ಶಿ ಲಲಿತಾ ಜಿ.ತಡಸದ, ಸುಧಾ ಸಿ.ಹುಣಸಿಕಟ್ಟಿ, ಕೋಶಾಧ್ಯಕ್ಷರಾದ ಪೂರ್ಣಿಮಾ ಕೆ.ಆಟದ, ಪೊತ್ನೀಸ ಕುಟಂಬದವರು ಉಪಸ್ಥಿತರಿದ್ದರೆಂದು ಸಂಸ್ಥೆಯ ಮಹಿಳಾ ಘಟಕದ ಗೌರವ ಕಾರ್ಯದರ್ಶಿಗಳಾದ ಜ್ಯೋತಿ ರಾಮನಗೌಡ ದಾನಪ್ಪಗೌಡ್ರ ತಿಳಿಸಿದ್ದಾರೆ.

ಸಭೆಯ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಮಹಿಳಾ ಘಟಕದ ಅಧ್ಯಕ್ಷರಾದ ನಂದಾ ಚಂದ್ರು ಬಾಳಿಹಳ್ಳಿಮಠ ಮಾತನಾಡಿ, 40 ವರ್ಷದ ನಂತರ ಹೆಚ್ಚಿನ ಜನರಿಗೆ ಮೊಣಕಾಲು ನೋವು ಬರುತ್ತಿದೆ. ಈ ನಿಟ್ಟಿನಲ್ಲಿ ಉತ್ತಮ ಆಹಾರ ಸೇವನೆಗೆ ಹೆಚ್ಚಿನ ಒತ್ತು ನೀಡಬೇಕು ಮತ್ತು ವ್ಯಾಯಾಮ, ಯೋಗದ ಕಡೆಗೆ ಹೆಚ್ಚಿನ ಗಮನ ನೀಡಬೇಕೆಂದು ತಿಳಿಸಿದರು.

## ಇ-ಪೌತಿ ಆಂದೋಲನಕ್ಕೆ ಕೈಜೋಡಿಸಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕೃಷಿ ಜಮೀನಿನ ಮಾಲೀಕರು ಮರಣ ಹೊಂದಿದ ನಂತರ ಆ ಜಮೀನಿನ ಮಾಲೀಕತ್ವ ಯಾರಿಗೆ ಸೇರಬೇಕು ಎನ್ನುವುದನ್ನು ನಿರ್ಧರಿಸುವುದಕ್ಕೆ ಸರಕಾರ ಇ-ಪೌತಿ ಆಂದೋಲನವನ್ನು ಜಾರಿಗೊಳಿಸಿದೆ. ಈ ಆಂದೋಲನಕ್ಕೆ ರೈತರೆಲ್ಲರೂ ಕೈಜೋಡಿಸಿ, ಇದನ್ನು ಯಶಸ್ವಿ ಮಾಡುವುದರ ಜೊತೆ-ಗೆ, ಮುಂದಿನ ವಾರಸಾವನ್ನು ಬೇಗನೆ ನಿರ್ಧರಿಸಿಕೊಳ್ಳಬೇಕೆಂದು ಉಪವಿಭಾಗಾಧಿಕಾರಿ ಗಂಗಪ್ಪ ಹೇಳಿದರು.

ಪಟ್ಟಣದ ಚಾವಡಿಯಲ್ಲಿ ಇ-ಪೌತಿ ಆಂದೋಲನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇ-ಪೌತಿ ಖಾತಾ ಬದಲಾವಣೆಗೆ ಅರ್ಹ ಅರ್ಜಿದಾರರು ಪಹಣಿ ಪತ್ರ, ವಂಶ ವೃಕ್ಷ, ಮೃತರ ಮರಣ ಪ್ರಮಾಣ ಪತ್ರ ಮತ್ತು ಎಲ್ಲಾ ವಾರಸುದಾರರ ಆಧಾರ್ ಕಾರ್ಡ್‌ಗಳನ್ನು ತರಬೇಕು. ಇದರಿಂದ ಇ-ಪೌತಿ ಖಾತಾ ಬದಲಾವಣೆಗೆ ಅನುಕೂಲವಾಗುತ್ತದೆ. ಅರ್ಜಿದಾರರು ಅರ್ಜಿಯ ಜೊತೆಗೆ ತಮ್ಮ ಮೊಬೈಲ್ ನಂಬರ್ ಮತ್ತು ಆಧಾರ್ ಕಾರ್ಡ್‌ನ್ನು ಕಡ್ಡಾಯವಾಗಿ ಸಲ್ಲಿಬೇಕೆಂದು ಗಂಗಪ್ಪ ಹೇಳಿದರು.

ಇದು ಸರಕಾರ ಮತ್ತು ಕಂದಾಯ ಇಲಾಖೆಯ ಅತ್ಯಂತ ಮಹತ್ವದ ಯೋಜನೆಯಾಗಿದ್ದು, ವಾರಸಾ ಪ್ರಕಾರ ಮಾಲೀಕರು ಮರಣ ಹೊಂದಿದ ನಂತರ ಉತ್ತರಾಧಿಕಾರಿಗೆ ಮಾಲೀಕತ್ವ ವರ್ಗಾವಣೆಯಾಗದಿದ್ದಲ್ಲಿ ಈ ಇ-ಪೌತಿ ಕ್ರಮ ಅನುಕೂಲವಾಗಲಿದೆ. ಗ್ರಾಮ ಆಡಳಿತಾಧಿಕಾರಿಗಳು ಮೊದಲು ಒಟಿಪಿಯನ್ನು ದೃಢೀಕರಿಸಿಕೊಂಡು ನಿಮ್ಮ ಖಾತಾ ಬದಲಾವಣೆಗೆ ಮುಂದಾಗುತ್ತಾರೆ ಎಂದರು.

ಈ ಸಂದರ್ಭದಲ್ಲಿ ಎಪಿಎಂಸಿ ಮಾಜಿ ಉಪಾಧ್ಯಕ್ಷ ಬಾಳಪ್ಪ ಸೋಮಗೊಂಡ, ರೈತ ಮುಖಂಡರು, ರೈತ ಬಂಧುಗಳು, ಗ್ರಾಮ ಲೆಕ್ಕಾಧಿಕಾರಿ ದಾವಲ ಇಟಗಿ ಉಪಸ್ಥಿತರಿದ್ದರು.



ಹುಬ್ಬಳ್ಳಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಶುಕ್ರವಾರ ಅಣ್ಣಿಗೇರಿ ತಾಲೂಕಿನ ಗ್ರಾಮ ಪಂಚಾಯಿತಿ ನಲವಡಿಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಸ್ಮಶಾನ ಕಾಮಗಾರಿ ಮುಕ್ತಿವನ, ಕೂಸಿನ ಮನೆ ವೀಕ್ಷಣೆ ಮಾಡಿದರು. ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು ಮತ್ತು ಅಣ್ಣಿಗೇರಿ ತಾಲೂಕಿನ ಗ್ರಾಮ ಪಂಚಾಯಿತಿ ಹಳ್ಳಿಕೇರಿಯ ಪಾಂಡುರಂಗ ದೇವಸ್ಥಾನದಲ್ಲಿ ಉಚಿತ ಆರೋಗ್ಯ ಮೇಳಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಜಿ.ಪಂ ಉಪಕಾರ್ಯದರ್ಶಿ ಬಿ.ಎಸ್. ಮುಗನೂರಮಠ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಂಜಾರಾ ಲಂಬಾಣಿ ಸಮಾಜದಿಂದ ನೂತನ ಎಸ್.ಪಿಯವರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾಗಿ ಅಧಿಕಾರ ಸ್ವೀಕರಿಸಿರುವ ರೋಹನ್ ಜಗದೀಶರನ್ನು ಗದಗ ತಾಲೂಕಿನ ಲಂಬಾಣಿ ಬಂಜಾರ ಸಮಾಜದ ವತಿಯಿಂದ ಗೌರವಿಸಿ ಸನ್ಮಾನಿಸಲಾಯಿತು.

ಬಂಜಾರ ಸಮಾಜದ ಮುಖಂಡರಾದ ಸೋಮು ಲಮಾಣಿ ಮಾತನಾಡಿ, ಗದಗ ತಾಲೂಕಿನ ಎಲ್ಲಾ ತಾಂಡಾಗಳ ಸಮಸ್ಯೆಗಳನ್ನು ಪರಿಹರಿಸಲು ತ್ವರಿತ ಪರಿಹಾರ ಕಂಡುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಬೇಕೆಂದು ವಿನಂತಿಸಿದರು.




ಈ ಸಂದರ್ಭದಲ್ಲಿ ಹಿರಿಯರಾದ ರಘುವೀರ ಲಮಾಣಿ, ಹಾಮಜಪ್ಪ ಲಮಾಣಿ, ಠಾಕುರ ಜಾಧವ, ಸೋಮು ಲಮಾಣಿ, ಶ್ರೀಕಾಂತ್ ಪೂಜಾರ, ತಾಲಪ್ಪ ಜಾಧವ, ಲೋಕೇಶ್ ಕಟ್ಟಿಮನಿ, ಅನಿಲ ಕಾರಭಾರಿ, ದೇವು ಪೂಜಾರ, ಶಶಿ ಹಿರೇಮಠ, ಸಂತೋಷ ಲಮಾಣಿ, ಈಶ್ವರ ಲಮಾಣಿ, ತುಕಾರಾಮ ಲಮಾಣಿ, ಆಕಾಶ ಲಮಾಣಿ ಮುಂತಾದವರಿದ್ದರು.

**ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ದಶಕದ ಸಂಭ್ರಮ । ವೈದ್ಯಕೀಯ ವಿಜ್ಞಾನ ವಸ್ತು ಪ್ರದರ್ಶನ ಆಯೋಜನೆ**

# 'ಮೆಡಿವಿಜನ್-2025' ಕಾರ್ಯಕ್ರಮ ಜುಲೈ 21ರಿಂದ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಕೆ.ಎಚ್.ಪಾಟೀಲ (ಗದಗ) ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯು ಕರ್ನಾಟಕ ಸರ್ಕಾರದ ಅಧೀನದಲ್ಲಿರುವ ಸ್ವಾಯುತ್ತ ಸಂಸ್ಥೆಯಾಗಿದ್ದು, ಶೈಕ್ಷಣಿಕ ವರ್ಷ ಪ್ರಾರಂಭವಾಗಿ 10 ವರ್ಷ ತುಂಬಿದೆ. ಈಗಾಗಲೇ 5 ಎಂ.ಬಿ.ಬಿ.ಎಸ್ ಬ್ಯಾಚಿನ ವಿದ್ಯಾರ್ಥಿಗಳು ಹಾಗೂ 2 ಸ್ನಾತಕೋತ್ತರ ವಿದ್ಯಾರ್ಥಿಗಳು ಪದವಿಯನ್ನು ಪಡೆದಿದ್ದು, ಅನೇಕ ವಿದ್ಯಾರ್ಥಿಗಳು ವಿಶ್ವವಿದ್ಯಾಲಯದ ಬಂಗಾರದ ಪದಕಕ್ಕೆ ಭಾಜಿನರಾಗಿದ್ದಾರೆ.

ಸಂಸ್ಥೆಯ ಆಸ್ಪತ್ರೆಯಲ್ಲಿ ಕಳೆದ 10 ವರ್ಷಗಳಲ್ಲಿ ಒಟ್ಟು 36.14 ಲಕ್ಷ ಹೊರರೋಗಿಗಳು, 4.52 ಲಕ್ಷ ಒಳರೋಗಿಗಳು, 51.7 ಸಾವಿರ ಮೇಜರ್ ಶಸ್ತ್ರ ಚಿಕಿತ್ಸೆಗಳು, 1.18 ಲಕ್ಷ ಮೈನರ್ ಶಸ್ತ್ರ ಚಿಕಿತ್ಸೆಗಳು, 56.8 ಸಾವಿರ ಹೆರಿಗೆ ಮತ್ತು ಚಿಕಿತ್ಸೆ ಮಾಡಲಾಗಿದೆ. ಸಂಸ್ಥೆಯಲ್ಲಿ 12 ಶಸ್ತ್ರಚಿಕಿತ್ಸಾ ಕೊಠಡಿಗಳು, 50 ಐ.ಸಿ.ಯು ಹಾಸಿಗೆಗಳು, 35 ತುರ್ತು ಹಾಸಿಗೆಗಳು ಮತ್ತು 450 ಸಾಮಾನ್ಯ ಹಾಸಿಗೆಗಳನ್ನು ಹೊಂದಿದ ಆಸ್ಪತ್ರೆ ಸಾರ್ವಜನಿಕ ಸೇವೆಗೆ ಲಭ್ಯವಿದ್ದು, 350 ಹಾಸಿಗೆಗಳ ಹಳೆಯ ಜಿಲ್ಲಾ ಆಸ್ಪತ್ರೆಯೊಂದಿಗೆ ಸೇವೆ ನೀಡುತ್ತಿದೆ.

ಸಂಸ್ಥೆಯಲ್ಲಿ ಕ್ಯಾಥಲ್ಯಾಬ್ ಹೊಂದಿರುವ ಹೃದಯ ಸಂಬಂಧಿತ ಸೂಪರ್ ಸ್ಪೆಷಾಲಿಟಿ ಘಟಕವು ಜನತೆಗೆ ಸೇವೆ ನೀಡುತ್ತಿದೆ. ಈಗಾಗಲೇ 204 ಜನರಿಗೆ ಚಿಕಿತ್ಸೆ ನೀಡಲಾಗಿದೆ. ಜೊತೆಗೆ ಪ್ಯಾರಾಮೆಡಿಕಲ್, ಬಿಎಸ್ಸಿ ಅಲೈಡ್ ಸೈನ್ಸ್, ಜಿ.ಎನ್.ಎಮ್, ಬಿಎಸ್ಸಿ ನರ್ಸಿಂಗ್ ಹಾಗೂ ಪೋಸ್ಟ್ ಡಾಕ್ಟೋರಲ್ ಫೆಲೋಶಿಪ್ ಕೋರ್ಸ್‌ಗಳು ಆರಂಭವಾಗಿ ಯಶಸ್ವಿಯಾಗಿ ನಡೆದುಕೊಂಡುಬರುತ್ತಿವೆ. ಸಂಸ್ಥೆಯು ಗ್ರಾಮೀಣ ಕರ್ನಾಟಕ ಆರೋಗ್ಯ ಸೇವೆಯಲ್ಲಿ ಹಾಗೂ ವೈದ್ಯಕೀಯ ಶಿಕ್ಷಣದಲ್ಲಿ ಉನ್ನತ ಮಾದರಿಯಾಗಿ ಗುರುತಿಸಿಕೊಂಡಿದೆ.




ಸಂಸ್ಥೆಯ ದಶಮಾನೋತ್ಸವದ ಪ್ರಯುಕ್ತ 'ಉತ್ತಮ' ಎಂಬಿಬಿಎಸ್ ಬ್ಯಾಚಿನ ವಿದ್ಯಾರ್ಥಿಗಳು, ಶಾಲಾ ಮಕ್ಕಳಲ್ಲಿ ವೈದ್ಯಕೀಯ ವಿಜ್ಞಾನದ ತಿಳುವಳಿಕೆ ಮೂಡಿಸಲು ಹಾಗೂ ಆರೋಗ್ಯದ ಬಗ್ಗೆ ಅರಿವು ಮೂಡಿಸಲು 'ಮೆಡಿವಿಜನ್-2025' ವೈದ್ಯಕೀಯ ವಿಜ್ಞಾನ ವಸ್ತು ಪ್ರದರ್ಶನವನ್ನು ಜುಲೈ 21ರಿಂದ 23ರವರೆಗೆ ಬೆಳಿಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಹಮ್ಮಿಕೊಂಡಿದೆ.

ಮೆಡಿವಿಜನ್ ವೈದ್ಯಕೀಯ ವಿಜ್ಞಾನ ವಸ್ತು ಪ್ರದರ್ಶನದಲ್ಲಿ ಮಾನವ ಶರೀರ ರಚನೆ, ನೈಜ ಅಂಗಾಂಗಗಳ ಪ್ರದರ್ಶನ, ಶರೀರ ಕ್ರಿಯೆ-ತಿಳುವಳಿಕೆ, ಆರೋಗ್ಯದ ಬಗ್ಗೆ ಮಾಹಿತಿ, ಕ್ಯಾನ್ಸರ್, ಸಕ್ಕರೆ ಕಾಯಿಲೆ, ರಕ್ತದೊತ್ತಡ, ಹೃದಯ ಕಾಯಿಲೆ, ಥೈರಾಯ್ಡ್ ಇನ್ನಿತರೆ ಕಾಯಿಲೆಗಳ ಬಗ್ಗೆ ತಿಳುವಳಿಕೆ, ಅಧುನಿಕ ವೈದ್ಯಕೀಯ ಉಪಕರಣಗಳ ಪ್ರದರ್ಶನ, ಆಹಾರ ಪದ್ಧತಿಗಳ ಬಗ್ಗೆ ಅರಿವು ಮುಂತಾದ ವಿಷಯಗಳ ಬಗ್ಗೆ ಮಾಹಿತಿ ಇರುತ್ತದೆ.

ಜೊತೆಗೆ ಮಕ್ಕಳಿಗಾಗಿ ವಿವಿಧ ಆಟಗಳನ್ನು ಏರ್ಪಡಿಸಲಾಗಿದೆ. ವೈದ್ಯಕೀಯ ವಿಜ್ಞಾನದ ಅರಿವನ್ನು ಶಾಲಾ ಮಕ್ಕಳಿಗೆ ತಿಳಿಸುವ ಪ್ರಯುಕ್ತ ಎಂ.ಬಿ.ಬಿ.ಎಸ್ ವಿದ್ಯಾರ್ಥಿಗಳು, ಮಾದರಿಗಳನ್ನು, ಚಿತ್ರಪಟಗಳನ್ನು ತಯಾರು ಮಾಡಿ ಪ್ರದರ್ಶಿಸಲಿದ್ದಾರೆ. ಕಾರ್ಯಕ್ರಮದ ಉದ್ದೇಶವು ಮಕ್ಕಳಿಗೆ ವೈದ್ಯಕೀಯ ವಿಜ್ಞಾನಗಳ ಬಗ್ಗೆ ಆಸಕ್ತಿ ಮೂಡಿಸುವುದು, ಸದೃಡ ಆರೋಗ್ಯವಂತ ಭಾರತ ನಿರ್ಮಾಣಕ್ಕಾಗಿ ಮಕ್ಕಳಿಗೆ ಆರೋಗ್ಯದ ಬಗ್ಗೆ ತಿಳುವಳಿಕೆ, ಭವಿಷ್ಯದಲ್ಲಿ ವೈದ್ಯರಾಗುವ ಕನಸುಗಳಿಗೆ ಪ್ರೇರಣೆ ನೀಡುವುದಾಗಿದೆ.

ಈ ಕಾರ್ಯಕ್ರಮದಲ್ಲಿ 6ರಿಂದ 10ನೇ ತರಗತಿಯ ಶಾಲಾ ಮಕ್ಕಳು ಹಾಗೂ ಪಿ.ಯು.ಸಿ ವಿಜ್ಞಾನ ವಿದ್ಯಾರ್ಥಿಗಳು ಉಚಿತವಾಗಿ ಭಾಗವಹಿಸಬಹುದು. ಈಗಾಗಲೇ 114 ಶಾಲೆಗಳ 20 ಸಾವಿರ ವಿದ್ಯಾರ್ಥಿಗಳು ನೋಂದಣಿ ಮಾಡಿದ್ದು, ಸಾರ್ವಜನಿಕರೂ ಭಾಗವಹಿಸಬಹುದು. ಆದರೆ ಮೊದಲ ಆದ್ಯತೆ ಶಾಲಾ ಮಕ್ಕಳಿಗೆ ನೀಡಲಾಗುತ್ತಿದೆ.

ಕಾರ್ಯಕ್ರಮವನ್ನು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ.ಪಾಟೀಲರು ಜುಲೈ 21ರಂದು ಬೆಳಿಗ್ಗೆ 9.30 ಗಂಟೆಗೆ ಉದ್ಘಾಟಿಸಲಿದ್ದಾರೆ. ನಿರ್ದೇಶಕರಾದ ಡಾ. ಬಸವರಾಜ ಪಿ.ಬೊಮ್ಮನಹಳ್ಳಿ, ಪ್ರಾಂಶುಪಾಲ ಡಾ. ರಾಜು ಜಿ.ಎಂ, ವೈದ್ಯಕೀಯ ಅಧೀಕ್ಷಕರಾದ ಡಾ. ರೇಖಾ ಸೋನಾವನೆ, ಶಸ್ತ್ರಚಿಕಿತ್ಸಕರಾದ ಡಾ. ಬಿ.ಸಿ. ಕರಿಗೌಡರ, ಡಾ. ಸಮತಾ, ಡಾ. ಮಹಾಂತೇಶ ಪಾಟೀಲ ಹಾಗೂ ಎಲ್ಲ ವೈದ್ಯರ ಬಳಗ ಹಾಗೂ ವಿದ್ಯಾರ್ಥಿ ಬಳಗವು ಸರ್ವರನ್ನು ಆಹ್ವಾನಿಸಿದೆ.









# ವರ್ಗಾವಣೆಗೊಂಡ ಪೊಲೀಸರಿಗೆ ಬೀಳ್ಕೊಡುಗೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಸೇವೆ ಸಲ್ಲಿಸಿ ವರ್ಗಾವಣೆಗೊಂಡ ವೈ.ಎಸ್. ಭಿಕ್ಷಾವರ್ತಿಮಠ, ಎಸ್.ಕೆ. ತಪ್ಪಲದ, ಎಂ.ಎಂ. ಶೀಗಿಹಳ್ಳಿ, ವಿಜಯ ಚವ್ಹಾಣ, ಆರ್.ಪಿ. ಮಾಳೊತ್ತರ, ಲೋಕೇಶ ಲಮಾಣಿ ಅವರನ್ನು ಶುಕ್ರವಾರ ಸನ್ಮಾನಿಸಿ ಬೀಳ್ಕೊಡಲಾಯಿತು.

ಪಿಎಸ್‌ಐ ನಾಗರಾಜ ಗಡಾದ ಮಾತನಾಡಿ, ಲಕ್ಷ್ಮೇಶ್ವರ ಠಾಣೆಯಲ್ಲಿ ಸಿಬ್ಬಂದಿಗಳ ಸಹಕಾರದಿಂದ ಉತ್ತಮ ಕೆಲಸ ಮಾಡಲು ಸಾಧ್ಯವಾಗಿದೆ. ಈಗ ವರ್ಗಾವಣೆಗೊಂಡಿರುವ ಸಿಬ್ಬಂದಿಗಳ ಸೇವೆ ಶ್ಲಾಘನೀಯ. ಮುಂದಿನ ದಿನಗಳಲ್ಲಿ ಅವರು ಬೇರೆ ಬೇರೆ ಠಾಣೆಗಳಲ್ಲಿ ಇದೇ ರೀತಿಯ ಸೇವೆ ಸಲ್ಲಿಸಿ ಇಲಾಖೆಗೆ ಒಳ್ಳೆಯ ಹೆಸರು ತರಲಿ ಎಂದರು.



ಅಧ್ಯಕ್ಷತೆ ವಹಿಸಿದ್ದ ಸಿಪಿಐ ನಾಗರಾಜ ಮಾಡಳ್ಳಿ ಮಾತನಾಡಿ, ಪೊಲೀಸರ ವೈಯಕ್ತಿಕ ಬದುಕಿಗಿಂತ ಇಲಾಖೆಯ ಕೆಲಸವೂ ಅಷ್ಟೇ ಮುಖ್ಯ. ಪೊಲೀಸರು ಒತ್ತಡದಲ್ಲಿ ಕರ್ತವ್ಯ ನಿರ್ವಹಿಸುತ್ತಾರೆ. ಸಾರ್ವಜನಿಕರು ನಮ್ಮ ಮೇಲೆ ನಂಬಿಕೆ, ವಿಶ್ವಾಸ ಇಟ್ಟಿರುತ್ತಾರೆ. ನಾವು ಪ್ರಾಮಾಣಿಕತೆ ಮತ್ತು ನಿಷ್ಠೆಯಿಂದ ಕರ್ತವ್ಯ ನಿರ್ವಹಿಸುವ ಮೂಲಕ ಅವರ ವಿಶ್ವಾಸ ಉಳಿಸಿಕೊಳ್ಳಬೇಕು. ತಾಲೂಕಿನಲ್ಲಿ ಅಪರಾಧ ಚಟುವಟಿಕೆಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗಿದೆ. ಜನರು ಪೊಲೀಸರೊಂದಿಗೆ ಸಹಕರಿಸಿ ಅಪರಾಧಗಳ ನಿಯಂತ್ರಣಕ್ಕೆ ಕೈಜೋಡಿಸಬೇಕು ಎಂದರು.

ಸವಣೂರು ಪುರಸಭೆಯ ಕಂದಾಯ ನಿರೀಕ್ಷಕ ಮಹೇಶ ಹಡಪದ, ಲಕ್ಷ್ಮೇಶ್ವರ ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಮಾತನಾಡಿದರು. ಈ ಸಂದರ್ಭದಲ್ಲಿ ಕ್ರೈಮ್ ಪಿಎಸ್‌ಐ ಟಿ.ಕೆ. ರಾಠೋಡ ಹಾಗೂ ಠಾಣೆಯಲ್ಲಿ ಉತ್ತಮ ಸೇವೆ ಸಲ್ಲಿಸಿದ ಪಾಂಡುರಂಗರಾವ್, ಎಚ್.ಬಿ. ಕಲ್ಲಣ್ಣವರ, ಡಿ.ಎಸ್. ನದಾಫ್ ಅವರನ್ನು ಸನ್ಮಾನಿಸಲಾಯಿತು.

# ಉಪನ್ಯಾಸ, ಸಂವಾದ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ವಿದ್ಯಾದಾನ ಸಮಿತಿ ಶಿಕ್ಷಣ ಸಂಸ್ಥೆಯಲ್ಲಿ ಗಗನಯಾನಿ ಶುಭಾಂಶು ಶುಕ್ಲಾ ಅವರ ಬಾಹ್ಯಾಕಾಶ ಸಂಶೋಧನೆಯ ಯಶಸ್ವಿ ಪ್ರಯಾಣದ ಕುರಿತು ಇಸ್ರೋದ ವಿಶ್ರಾಂತ ವಿಜ್ಞಾನಿ ಸುಧೀಂದ್ರ ಬಿಂದಗಿ ಅವರಿಂದ ಉಪನ್ಯಾಸ ಹಾಗೂ ಸಂವಾದ ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಇಂದಿನ ವಿದ್ಯಾರ್ಥಿ ನಾಳಿನ ಭಾರತದ ವಿಜ್ಞಾನಿಯಾಗಬೇಕು. ಜಗತ್ತಿನ ಬಾಹ್ಯಾಕಾಶ ಸಂಶೋಧನೆಯ ಕುರಿತು ಕನಸು ಕಾಣಬೇಕು. ನಮ್ಮ ಭಾರತದ ಸಾಧನೆಯು ಉಳಿದ ರಾಷ್ಟ್ರಗಳಿಗೆ ಮಾದರಿಯಾಗಬೇಕು. ಇದಕ್ಕೆ ಸಾಕ್ಷಿಯಂತೆ ಭಾರತದ ಹೆಮ್ಮೆಯ ಪುತ್ರ, ಗಗನಯಾನಿ ಶುಭಾಂಶು ಶುಕ್ಲಾ ಇಡೀ ಜಗತ್ತಿಗೆ ಆದರ್ಶಪ್ರಾಯರಾಗಿದ್ದಾರೆ ಎಂದರು.



ಸಮಿತಿಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ ಮಾತನಾಡಿ, ವಿಜ್ಞಾನಿ ಸುಧೀಂದ್ರ ಬಿಂದಗಿ ಹಾಗೂ ತಮ್ಮ ನಡುವಿನ ಬಾಲ್ಯ ಜೀವನದ ನಂಟನ್ನು ವಿವರಿಸಿದರು.

ಕ್ಲಾಸಿಕ್ ಸಿಬಿಎಸ್‌ಸಿ ಪ್ರೌಢಶಾಲೆಯ ಪ್ರಾಚಾರ್ಯ ಎಂ.ಆರ್. ಡೊಳ್ಳಿನ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ವಿದ್ಯಾದಾನ ಸಮಿತಿಯ ಸಿಇಓ ಪಿ.ಎಚ್. ಕಡಿವಾಲ ವಂದಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಶೈಕ್ಷಣಿಕ ಮಾರ್ಗದರ್ಶಕರಾದ ಪ್ರತೀಕ ಹುಯಿಲಗೋಳ, ಮುಖ್ಯೋಪಾಧ್ಯಾಯೆ ಎಸ್.ವಿ. ಬಂಡಿ, ಹಿರಿಯ ಶಿಕ್ಷಕರಾದ ಎಸ್.ಎಸ್. ಗಂಜಿ, ಎಂ.ವಿ. ವಡವಿ, ಉಪ ಪ್ರಾಚಾರ್ಯ ಅಕ್ಷಯ್ ಜಿ, ಎಂ.ಎಲ್. ಬೆರಗೇರಿ, ಪಂಪಣ್ಣ ರೊಡ್ಡಾನವರ, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಗುತ್ತಿಗೆದಾರರ ಸಂಘದ ಪದಾಧಿಕಾರಿಗಳ ಆಯ್ಕೆ



**■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶನಿವಾರ ತಾಲೂಕು ಗುತ್ತಿಗೆದಾರರ ಸಂಘದ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಅಧ್ಯಕ್ಷರಾಗಿ ತೆಲಗಿ ಉಮಾಕಾಂತ, ಉಪಾಧ್ಯಕ್ಷರಾಗಿ ಎಚ್.ಎಂ. ವಿಕ್ರಮ, ಕಾರ್ಯದರ್ಶಿಯಾಗಿ ಎಚ್. ಜಯಪ್ರಕಾಶ ಅವಿರೋಧವಾಗಿ ಆಯ್ಕೆಯಾದರು. ಗೌರವಾಧ್ಯಕ್ಷರಾಗಿ ತೋಟಪ್ಪ ಶೆಟ್ಟಿ, ಸಹ ಕಾರ್ಯದರ್ಶಿಯಾಗಿ ಜಿ.ಆರ್. ರವಿನಾಯ್ಕ್, ಖಜಾಂಚಿಯಾಗಿ ಬಿ.ಜಬಿವುಲ್ಲ ಆಯ್ಕೆಯಾದರು.

ಸಂಘದ ನಿರ್ದೇಶಕರಾಗಿ ಹುಣಿಸಿಹಳ್ಳಿ ಮಂಜುನಾಥ, ರಾಗಿರೊಟ್ಟಿ ಜಾಕೀರ ಹುಸೇನ್, ಪೊತಲಕಟ್ಟಿ ಮಹೇಶಪ್ಪ, ಬೆಂಡಿಗೇರಿ ಸಣ್ಣತಾಂಡ ರಮೇಶನಾಯ್ಕ್ ಮತ್ತು ಜಿಲ್ಲಾ ಪ್ರತಿನಿಧಿಯಾಗಿ ನಂದಬೇವೂರು ಮಂಜುನಾಥ ಅವರು ಆಯ್ಕೆಯಾಗಿದ್ದಾರೆ.

ಈ ಸಂದರ್ಭದಲ್ಲಿ ಗುತ್ತಿಗೆದಾರರಾದ ಬಾಣದ ಅಂಜಿನಪ್ಪ, ಮಹಾಂತೇಶನಾಯ್ಕ್, ಟಿ.ಅಂಜಿನಪ್ಪ, ಛಲವಾದಿ ಪರಶುರಾಮ, ನಾಗರಾಜನಾಯ್ಕ್, ಪ್ರವೀಣ್‌ಕುಮಾರ, ಅರುಣ್ ಕುಮಾರ ಉಮೇಶನಾಯ್ಕ್, ನೂರ್‍ಯಾನಾಯ್ಕ, ಚಂದ್ರನಾಯ್ಕ, ಭೋವಿ ಬಸವರಾಜ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪತ್ತೂರಿನಲ್ಲಿ ಮುಂಗಾರು ಕವಿಗೋಷ್ಠಿ-2025

**■ವಿಜಯಸಾಕ್ಷಿ ಸುದ್ದಿ, ಪುತ್ತೂರು**

ದಿ. ಚಿದಾನಂದ ಕಾಮತ್ ಅವರು ಕನ್ನಡ ಸಾಹಿತ್ಯ ಲೋಕಕ್ಕೆ ಅಪಾರ ಕೊಡುಗೆಯನ್ನು ನೀಡಿದ್ದಾರೆ. ಅವರ ಸ್ಮರಣಾರ್ಥ ಕಾರ್ಯಕ್ರಮ ಆಯೋಜಿಸಿ ಹೊಸ ಕವಿಗಳಿಗೆ ವೇದಿಕೆಯನ್ನು ಕಲ್ಪಿಸಿರುವುದು ಶ್ಲಾಘನೀಯ. ವಿದ್ಯಾರ್ಥಿಗಳು ಸಾಹಿತ್ಯದ ಬಗ್ಗೆ ಇನ್ನಷ್ಟು ಒಲವು ತೋರಿಸಿ ಭಾಷಾ ವೈವಿಧ್ಯತೆಯನ್ನು ಹೆಚ್ಚಿಸಬೇಕೆಂದು ಪುತ್ತೂರಿನ ಪ್ರಗತಿ ಎಜುಕೇಶನಲ್ ಫೌಂಡೇಶನ್ ಸ್ಥಾಪಕಾಧ್ಯಕ್ಷ ಗೋಕುಲ್‌ನಾಥ್ ಪಿ.ವಿ ಅಭಿಪ್ರಾಯಪಟ್ಟರು

ಚಿಗುರೆಲೆ ಸಾಹಿತ್ಯ ಬಳಗ ಪುತ್ತೂರು ನೇತೃತ್ವದಲ್ಲಿ, ಕನ್ನಡ ಸಾಹಿತ್ಯ ಪರಿಷತ್ತು ಪುತ್ತೂರು ತಾಲೂಕು ಘಟಕ, ಪ್ರಗತಿ ಸ್ಟಡಿ ಸೆಂಟರ್ ಆಶ್ರಯದಲ್ಲಿ, ದಿ. ಚಿದಾನಂದ ಕಾಮತ್ ಕಾಸರಗೋಡು ಇವರ ಸ್ಮರಣಾರ್ಥ ಹಮ್ಮಿಕೊಂಡಿದ್ದ ಮುಂಗಾರು ಕವಿಗೋಷ್ಠಿ-2025 ಉದ್ಘಾಟಿಸಿ ಅವರು ಮಾತನಾಡಿದರು.




ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕ.ಸಾ.ಪ ಅಧ್ಯಕ್ಷ ಪುತ್ತೂರು ಉಮೇಶ್ ನಾಯಕ್, ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಸುದ್ದಿ ನಿರೂಪಕಿ ಹೇಮಾ ಜಯರಾಮ್, ಪ್ರಕಾಶಕ ಮಹೇಶ್ ಆರ್.ನಾಯಕ್, ವರದಿಗಾರ ಇಬ್ರಾಹಿಂ ಖಲೀಲ್ ಬನ್ನೂರು, ಪ್ರಗತಿ ಸ್ಟಡಿ ಸೆಂಟರ್ ಪ್ರಾಂಶುಪಾಲೆ ಹೇಮಲತಾ ಎನ್, ಚಿಗುರೆಲೆ ಸಾಹಿತ್ಯ ಬಳಗದ ಸ್ಥಾಪಕಾಧ್ಯಕ್ಷ ಚಂದ್ರಮೌಳಿ ಕಡಂದೇಲು, ನಾರಾಯಣ ಕುಂಬ್ರ ಮಾತನಾಡಿದರು. ಪೊಲೀಸ್ ಅಧಿಕಾರಿ, ಸಾಹಿತಿಗಳಾದ ಹರೀಶ್ ಮಂಜೊಟ್ಟಿ, ಬಾಬು ಎಂ, ಸುದರ್ಶನ್ ಮುರ ಉಪಸ್ಥಿತರಿದ್ದರು.

ಸಭಾ ಕಾರ್ಯಕ್ರಮ ಬಳಿಕ ನಡೆದ ಕವಿಗೋಷ್ಠಿಯಲ್ಲಿ ಕಪ್ಪತ್ತಗಿರಿ ಸಾಹಿತ್ಯ, ಕಲಾ ಮತ್ತು ಸಾಂಸ್ಕೃತಿಕ ವೇದಿಕೆ ಗದಗ ಜಿಲ್ಲಾ ಸ್ಥಾಪಕಾಧ್ಯಕ್ಷೆ ಚಂದ್ರಕಲಾ ಎಂ.ಇಟಗಿಮಠ ಅಧ್ಯಕ್ಷತೆ ವಹಿಸಿ ಮಾತನಾಡಿ, ಕನ್ನಡ ಶ್ರೀಮಂತ ಭಾಷೆಯಾಗಿದೆ. ಕನ್ನಡ ಭಾಷಾ ಸಾಹಿತ್ಯದಿಂದ ಪರಸ್ಪರ ಬಾಂಧವ್ಯ ಬೆಳೆಸಲು ಸಾಧ್ಯವಾಗುತ್ತಿದೆ.

ಅದನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದರು.

ಗಿರೀಶ್ ಕೊಯಿಲ, ಸುನೀತಾ ಎನ್, ಸೌಜನ್ಯ ಬಿ.ಎಂ ಕೆಯ್ಯೂರು ಹಾಗೂ ಶ್ರೀಕಲಾ ಕಾರಂತ್ ಅಳಿಕೆ ಕಾರ್ಯಕ್ರಮಗಳನ್ನು ನಿರ್ವಹಿಸಿದರು. ಕೀರ್ತನ ಪ್ರಾರ್ಥಿಸಿದರು. ಪ್ರಮೀಳ ಎನ್.ಡಿ ಸ್ವಾಗತಿಸಿದರೆ, ಪ್ರಿಯಾ ಸುಳ್ಯ ವಂದಿಸಿದರು.

# ಧರ್ಮಸ್ಥಳ ಪ್ರಕರಣವನ್ನು ಎಸ್‌ಐಟಿಗೆ ವಹಿಸಿ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಧರ್ಮಸ್ಥಳದಲ್ಲಿ ನೂರಾರು ಹೆಣ್ಣುಮಕ್ಕಳ ಅತ್ಯಾಚಾರ, ಕೊಲೆ ಕೃತ್ಯಗಳು ನಡೆದಿವೆ ಎಂದು ಹೇಳಲಾಗುತ್ತಿದ್ದು, ಇದು ದೇಶ ಕಂಡ ಅತ್ಯಂತ ಗಂಭೀರ ಪ್ರಕರಣ. ರಾಜ್ಯ ಸರ್ಕಾರ ಈ ವಿಚಾರದಲ್ಲಿ ನಿರ್ಲಕ್ಷ್ಯ ಮಾಡದೇ ಎಸ್‌ಐಟಿ ಮೂಲಕ ಸೂಕ್ತ ತನಿಖೆ ನಡೆಸಿ ಸತ್ಯಾಸತ್ಯತೆ ಪರಿಶೀಲಿಸಬೇಕು ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ರಾಜ್ಯಾಧ್ಯಕ್ಷ, ವಕೀಲ ತಾಹಿರ್ ಹುಸೇನ್ ಅಗ್ರಹಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಧರ್ಮಸ್ಥಳದಲ್ಲಿ ಮೂರು ದಶಕಗಳಲ್ಲಿ ನೂರಾರು ಹೆಣ್ಣುಮಕ್ಕಳ ಶವಗಳನ್ನು ಹೂತು ಹಾಕಿರುವುದಾಗಿ ಅನಾಮಧೇಯ ವ್ಯಕ್ತಿಯೊಬ್ಬ ದೂರು ನೀಡಿದ್ದರೂ ಸರ್ಕಾರ ತನಿಖೆ ಮಾಡಲು ಹಿಂದೇಟು ಹಾಕುತ್ತಿದೆ. ಕೃತ್ಯಗಳ ಮಹತ್ವದ ಸಾಕ್ಷಿಯೆನಿಸುವ ವ್ಯಕ್ತಿಯೇ ಖುದ್ದಾಗಿ ದ.ಕ ಎಸ್ಪಿಗೆ ದೂರು ನೀಡಿದ್ದರೂ ರಾಜ್ಯದ ಗೃಹ ಸಚಿವರು ಈವರೆಗೂ ಮೌನವಾಗಿದ್ದಾರೆ. ಪ್ರಭಾವಿಗಳ ಸುಪರ್ದಿಯಲ್ಲಿ ನಡೆಯುವ ಜನಸಾಮಾನ್ಯರ ಸಾವು-ನೋವುಗಳಿಗೆ ನ್ಯಾಯ ನಿರಾಕರಿಸಲಾಗುತ್ತಿದೆಯೇ ಎಂದು ಪ್ರಶ್ನಿಸಿರುವ ಅವರು, ಸರಕಾರವು ತನ್ನ ಹೊಣೆಗಾರಿಕೆಯನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕೆಂದು ಅವರು ಒತ್ತಾಯಿಸಿದ್ದಾರೆ.

# 'ಮನೆ-ಮನೆಗೆ ಪೊಲೀಸ್' ಕಾರ್ಯಕ್ರಮ ಜುಲೈ 20ಕ್ಕೆ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**



ಧಾರವಾಡ ಜಿಲ್ಲಾ ಪೊಲೀಸ್ ಇಲಾಖೆಯಿಂದ ಧಾರವಾಡ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯ ಹೆಬ್ಬಳ್ಳಿ ಗ್ರಾಮದಲ್ಲಿ ಸಮುದಾಯ ಪೊಲೀಸ್ ವ್ಯವಸ್ಥೆಯನ್ನು ಬಲಪಡಿಸುವ ಹಿತದೃಷ್ಟಿಯಿಂದ ಜುಲೈ 20ರಂದು ಬೆಳಿಗ್ಗೆ 10.30 ಗಂಟೆಗೆ ಆಯೋಜಿಸಿರುವ ಮನೆ-ಮನೆಗೆ ಪೊಲೀಸ್ ಎಂಬ ಕಾರ್ಯಕ್ರಮದಲ್ಲಿ ನೂತನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಭಾಗವಹಿಸಲಿದ್ದಾರೆ ಎಂದು ಪೊಲೀಸ್ ಇಲಾಖೆ ಪ್ರಕಟಣೆ ತಿಳಿಸಿದೆ.



ಗದಗ ನಗರದ ಲಯನ್ಸ್ ಕ್ಲಬ್‌ನ 2025-26ನೇ ಸಾಲಿಗೆ ಕಾರ್ಯದರ್ಶಿಯಾಗಿ ಆಯ್ಕೆಯಾದ ಗಣ್ಯ ಉದ್ಯಮಿ, ಶ್ರೀ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯದ ಸದಸ್ಯರಾದ ರಾಜಣ್ಣ ಮಲ್ಲಾಡದ ಅವರನ್ನು ನಗರದ ಶ್ರೀ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯದ ವತಿಯಿಂದ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ನಿಲಯದ ಗೌರವಾಧ್ಯಕ್ಷ ಎಸ್.ಎಸ್. ಕಳಸಾಪೂರ, ಉಪಾಧ್ಯಕ್ಷ ಉಮೇಶ ಪೂಜಾರ, ಪದಾಧಿಕಾರಿಗಳಾದ ಗುರುಮೂರ್ತಿ ಮರೇಗುದ್ದಿ, ವೆಂಕಟೇಶ ಇಮರಾಪೂರ, ಮುತ್ತು ಜಡಿ ಮುಂತಾದವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka